ಸಂಪುಟ : 10 ಸಂಚಿಕೆ: 176 ಪುಟ : 4+2 ಬೆಲೆ: 3.00 ಮಂಗಳವಾರ ಆಗಸ್ಟ್ 19 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 176 Pages : 4+2 Price : 3.00 Tuesday August 19 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ರಮೇಶ್ ಬೂದಿಹಾಳಗೆ ಸಿಎಂ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ನಡೆದ ಏಷ್ಯನ್ ಸರ್ಫಿಂಗ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗಳಿಸಿದ ಭಾರತದ ಪ್ರಪ್ರಥಮ ಸರ್ಫರ್, ಗದಗ ಜಿಲ್ಲೆ ಮುಂಡರಗಿ ತಾಲೂಕಿನ ಮುರುಡಿ ತಾಂಡಾದ ಯುವಕ ರಮೇಶ್ ಬೂದಿಹಾಳ ಅವರು ಸೋಮವಾರ ಮುಖ್ಯಮಂತ್ರಿಗಳನ್ನು ಭೇಟಿಯಾದರು.

ಕರ್ನಾಟಕ ರಾಜ್ಯ ಹಾಗೂ ಗದಗ ಜಿಲ್ಲೆಯ ಹೆಸರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಳಗಲು ಕಾರಣರಾದ ಯುವಕ ರಮೇಶ್ ಬೂದಿಹಾಳರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸನ್ಮಾನಿಸಿ ಗೌರವಿಸಿದರು. ಇವರ ಸಾಧನೆಯ ತುತ್ತ ತುದಿಗೇರಲಿ, ಭವಿಷ್ಯವು ಉಜ್ವಲವಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಉಪಸ್ಥಿತರಿದ್ದು, ಶುಭ ಹಾರೈಸಿದರು.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಸೂಚನೆ

# ಜನ-ಜಾನುವಾರು ಹಾನಿಯಾಗದಂತೆ ಎಚ್ಚರ ವಹಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಸಂಬಂಧಿಸಿದ ಇಲಾಖೆಗಳು ಎಚ್ಚರಿಕೆ ವಹಿಸಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ. ಮಳೆ ಪ್ರಮಾಣ ಹೆಚ್ಚಿದಂತೆ ಪ್ರವಾಹ, ರಸ್ತೆ ಅಪಘಾತ, ವಿದ್ಯುತ್ ದೋಷ, ಮನೆ ಕುಸಿತ ಮುಂತಾದ ಅಪಾಯಗಳು ಉಂಟಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರ ಜೀವ, ಆಸ್ತಿಯ ರಕ್ಷಣೆಗೆ ತಕ್ಷಣದ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಸೋಮವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ನೂತನ ಸಭಾಭವನದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ, ಮುಂಗಾರು ಹಂಗಾಮಿನಲ್ಲಿ ಮಳೆ ಹಾನಿ ಮತ್ತು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾತನಾಡಿದರು.

ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮಳೆಯಿಂದಾಗಿ ಮಣ್ಣಿನ ಮನೆಗಳು ಹಾಗೂ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳು ಅಪಾಯಕ್ಕೆ ಒಳಗಾಗುವ ಸಾಧ್ಯತೆ ಇರುವುದರಿಂದ ಈ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಸಂಬಂಧಿತ ಅಧಿಕಾರಿಗಳು ಮುಂಜಾಗ್ರತಾ ಕ್ರಮಗಳನ್ನು ತಕ್ಷಣ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.



ಮಳೆಯಿಂದಾಗಿ ಜನ-ಜಾನುವಾರು, ಜೀವ ಹಾನಿ ಆಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ರಸ್ತೆ, ಸೇತುವೆ ಹಾನಿಯಾಗಿದ್ದಲ್ಲಿ ಪರಿಶೀಲಿಸಿ, ಸಾರ್ವಜನಿಕರ ಹಿತದೃಷ್ಟಿಯಿಂದ ಕ್ರಮ ವಹಿಸಬೇಕು ಎಂದು ತಿಳಿಸಿದರು.

ನಿರಂತರ ಮಳೆಯಿಂದಾಗಿ ಜಿಲ್ಲೆಯಲ್ಲಿರುವ ಬೆಣ್ಣೆ ಹಳ್ಳ, ತುಪ್ಪರಿ ಹಳ್ಳ, ಬೇಡ್ತಿ ಹಳ್ಳ ಸೇರಿದಂತೆ ವಿವಿಧ ತಾಲೂಕುಗಳಲ್ಲಿ ಹರಿಯುತ್ತಿರುವ ಹಳ್ಳ-ಕೊಳ್ಳಗಳು ತುಂಬಿ ಹರಿಯುವ ಸಾಧ್ಯತೆ ಇದೆ. ಗ್ರಾಮಗಳಲ್ಲಿ ಜಾಗೃತಿ ಮೂಡಿಸಿ, ಜಲಮೂಲಗಳ ಸಮೀಪ ಸಂಚರಿಸದಂತೆ, ನೀರಿಗೆ ಇಳಿಯದಂತೆ ತಿಳಿಸಬೇಕು. ತಹಸೀಲ್ದಾರರು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಳ್ಳ, ಕೆರೆಗಳ ನೀರಿನ ಮಟ್ಟವನ್ನು ನಿರಂತರವಾಗಿ ಪರಿಶೀಲಿಸಬೇಕು. ಅಪಾಯಕಾರಿ ಮಟ್ಟ ತಲುಪಿದ ಸಂದರ್ಭದಲ್ಲಿ ತಕ್ಷಣ ಎಚ್ಚರಿಕೆ ಫಲಕಗಳನ್ನು ಅಳವಡಿಸಬೇಕು. ತಗ್ಗು ಪ್ರದೇಶಗಳು, ಹಳ್ಳ, ಕೆರೆಗಳ ತೀರ ಪ್ರದೇಶಗಳನ್ನು ಗುರುತಿಸಿ ಅಲ್ಲಿ ವಾಸಿಸುವವರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವಂತೆ ಕ್ರಮವಹಿಸಬೇಕು. ಜೀವ ಹಾನಿಗಳು ಸಂಭವಿಸಿದರೆ ಸಂಬಂಧಪಟ್ಟ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಎಚ್ಚರಿಸಿದರು.

ವೇದಿಕೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಇದ್ದರು. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯರು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

### ತುರ್ತು ಸಹಾಯವಾಣಿ

ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆ ಹಾಗೂ ಇತರ ಪ್ರಕೃತಿ ವಿಕೋಪದ ಸಂದರ್ಭಗಳಲ್ಲಿ ಜಿಲ್ಲೆಯ ಮಹಾನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ನಿರಾಶ್ರಿತರು, ಬಾಧಿತರು ಮತ್ತು ಸಾರ್ವಜನಿಕರು ತುರ್ತಾಗಿ ಸಂಪರ್ಕಿಸಲು ಅನುಕೂಲವಾಗುವಂತೆ ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ ಹಾಗೂ ಜಿಲ್ಲೆಯ ಎಲ್ಲ ತಹಸೀಲ್ದಾರರ ಕಾರ್ಯಾಲಯದಲ್ಲಿ ಮತ್ತು ಮಹಾನಗರ ಪಾಲಿಕೆಯಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆರಂಭಿಸಿ, ದಿನದ 24 ಗಂಟೆ ಕರ್ತವ್ಯ ನಿರ್ವಹಿಸಲು ಸಿಬ್ಬಂದಿಗಳನ್ನು ನೇಮಿಸಿ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಆದೇಶಿಸಿ ಕ್ರಮ ಕೈಗೊಂಡಿದ್ದಾರೆ.

## ಶ್ರೀ ವೀರಭದ್ರೇಶ್ವರ ರಥೋತ್ಸವ ಆ.24ಕ್ಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ವೀರಭದ್ರೇಶ್ವರ ರಥೋತ್ಸವವು ಆ. 24ರ ಸಂಜೆ 5ಕ್ಕೆ ಜರುಗಲಿದೆ ಎಂದು ಶ್ರೀ ವೀರಭದ್ರೇಶ್ವರ ದೇವಸ್ಥಾನದ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

ಶ್ರಾವಣ ಶುದ್ಧ ಪ್ರತಿಪದೆಯಿಂದ ಪಾಡ್ಯದವರೆಗೆ ನಿತ್ಯ ಪ್ರಾತಃಕಾಲ ಶ್ರಿ ವೀರಭದ್ರೇಶ್ವರರಿಗೆ ರುದ್ರಾಭಿಷೇಕ ನಡೆಯಲಿದೆ. ಆ.20ರಂದು ಕಳಸ ಹಾಗೂ ನಂದಿ ಕೋಲು ಮೆರವಣಿಗೆ ನಡೆಯಲಿದೆ. ಆ. 24ರ ಬೆಳಿಗ್ಗೆ ಅಗ್ನಿಕುಂಡ ಹಾಯುವುದು ಮತ್ತು ಪುರವಂತರೊಂದಿಗೆ ಗುಗ್ಗಳ ಕಾರ್ಯಕ್ರಮವು ದೇವಸ್ಥಾನದಿಂದ ಪಾದಗಟ್ಟಿಯವರೆಗೆ ನಡೆಯಲಿದೆ.

ಆ. 24ರ ಮಧ್ಯಾಹ್ನ 12.25ಕ್ಕೆ ಅಭಿಜಿತ್ ಲಗ್ನದಲ್ಲಿ ಸಾಮೂಹಿಕ ವಿವಾಹಗಳು ಜರುಗಲಿವೆ. ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ವಹಿಸಲಿದ್ದು, ಹಿರೇಮಠದ ಷ. ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಅಧ್ಯಕ್ಷತೆ ವಹಿಸಲಿದ್ದಾರೆ. ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳವರು ಮತ್ತು ದರಗಾದ ಮಂಜೂರ ಹುಸೇನ್‌ಶ್ಯಾವಲಿಯವರು ಸಾನ್ನಿಧ್ಯ ವಹಿಸಲಿದ್ದು, ಸಮ್ಮುಖವನ್ನು ಟ್ರಸ್ಟ್ ಕಮಿಟಿಯವರು ವಹಿಸಲಿದ್ದಾರೆ. ಶಾಸಕ ಜಿ.ಎಸ್. ಪಾಟೀಲ ಮತ್ತು ಮಾಜಿ ಶಾಸಕ ಕೆ.ಜಿ. ಬಂಡಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಅಕ್ಷತಾರೋಪಣದ ನಂತರ ಮಹಾಗಣಾರಾಧನೆ ಜರುಗಲಿದೆ. ಸಂಜೆ 5ಕ್ಕೆ ಶ್ರೀ ವೀರಭದ್ರೇಶ್ವರ ರಥೋತ್ಸವವು ಸಕಲ ವಾದ್ಯಗಳೊಂದಿಗೆ ಜರುಗಲಿದೆ. ಮರುದಿನ ಆ. 25ರಂದು ಸಂಜೆ 5ಕ್ಕೆ ಲಘುರಥೋತ್ಸವ ಜರುಗಲಿದೆ ಎಂದು ದೇವಸ್ಥಾನದ ಪ್ರಕಟಣೆ ತಿಳಿಸಿದೆ.

### ಶ್ರೀ ದುಂಡಿಬಸವೇಶ್ವರ ಜಾತ್ರಾ ಮಹೋತ್ಸವ । ಧರ್ಮಸಭೆಯಲ್ಲಿ ಮುಕ್ತಿಮಂದಿರ ಶ್ರೀಗಳ ಆಶೀರ್ವಚನ

# ಜಾತ್ರಾ ಮಹೋತ್ಸವಗಳು ಸಮಾನತೆಗೆ ಪ್ರೇರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಾತ್ರಾ ಮಹೋತ್ಸವಗಳು, ಧರ್ಮ ಜಾಗೃತಿ ಸಭೆಗಳು ಜಾತಿ-ಧರ್ಮಗಳ ಎಲ್ಲೆ ಮೀರಿ ಜನರಲ್ಲಿ ದೇವರು, ಧರ್ಮ, ಸಂಸ್ಕೃತಿ, ಮಾನವೀಯ ಮೌಲ್ಯಗಳನ್ನು ಬಿತ್ತುವ ಮತ್ತು ಸಮಾನತೆ, ಸಹಬಾಳ್ವೆ, ಸ್ನೇಹ, ಬಾಂಧವ್ಯ, ಭ್ರಾತೃತ್ವದ ಮನೋಭಾವ ಮೂಡಿಸುವಲ್ಲಿ ಪ್ರೇರಣೆಯಾಗುತ್ತವೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಸೋಮವಾರ ಲಕ್ಷ್ಮೇಶ್ವರ ಸಮೀಪದ ಗುಲಗಂಜಿಕೊಪ್ಪ ಗ್ರಾಮ ವ್ಯಾಪ್ತಿಯ ಶ್ರೀ ದುಂಡಿಬಸವೇಶ್ವರ ಜಾತ್ರಾ ಮಹೋತ್ಸವ, ನೂತನ ರಥೋತ್ಸವ ಮತ್ತು ಧರ್ಮಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮ ಕ್ಷೇತ್ರಗಳ ಸರ್ವತೋಮುಖ ಅಭಿವೃದ್ಧಿಗೆ ಭಕ್ತರ ಸಹಾಯ-ಸಹಕಾರ ಅಗತ್ಯ. ದೇವಸ್ಥಾನ, ಮಠ-ಮಾನ್ಯಗಳಿಗೆ ಕೊಡುವ ದಾನ, ಧರ್ಮಗಳು ನಿಮ್ಮ ಮೂಲಕ ಸಮಾಜಕ್ಕೆ ತಲುಪುತ್ತವೆ. ದೇವಸ್ಥಾನ, ಧರ್ಮ ಕಾರ್ಯಗಳು ನಮ್ಮನ್ನು ಸನ್ಮಾರ್ಗದತ್ತ ನಡೆಸಿ ಶಾಂತಿ, ನೆಮ್ಮದಿ, ಸಮೃದ್ಧಿ ಕೊಡುತ್ತವೆ. ಅತ್ಯಂತ ಪವಿತ್ರ ಮತ್ತು ಜಾಗೃತ ಸ್ಥಳವಾಗಿರುವ ಶ್ರೀ ದುಂಡಿಬಸವೇಶ್ವರ ದೇವಸ್ಥಾನ ಸಮಿತಿಯವರು ಪ್ರತಿವರ್ಷ ಜಾತ್ರಾಮಹೋತ್ಸವ ಕಾರ್ಯಕ್ರಮದಲ್ಲಿ ಲೋಕಕಲ್ಯಾಣಕ್ಕಾಗಿ ಹೋಮ-ಹವನ, ರಕ್ತದಾನ ಶಿಬಿರ, ಸಂಗೀತ, ಪ್ರಸಾದ ಸೇವೆ, ಗುರುಗಳಿಂದ ಧರ್ಮ ಸಂದೇಶ ನೀಡುವಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಮಾಡುತ್ತಿರುವುದು ಶ್ಲಾಘನೀಯ ಎಂದರು.



ಗಂಜಿಗಟ್ಟಿಯ ವೈಜನಾಥ ಶಿವಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಕರೇವಾಡಿಮಠದ ಮಳೆಮಲ್ಲಿಕಾರ್ಜುನ ಶ್ರೀಗಳು, ಹೂವಿನಶಿಗ್ಲಿಯ ಚನ್ನವೀರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಗ್ರಾ.ಪಂ ಅಧ್ಯಕ್ಷ ಕರಿಯಪ್ಪಗೌಡ ಹೊಸಗೌಡ್ರ, ಸಿದ್ದನಗೌಡ ಬಳ್ಳೊಳ್ಳಿ, ನೀಲಪ್ಪಗೌಡ ದುರಗನಗೌಡ್ರ, ನಿಂಗನಗೌಡ ಹೊಸಗೌಡ್ರ, ಸುಧಾ ಮಾದರ, ಪ್ರೇಮವ್ವ ರಾಯಣ್ಣವರ, ದುಂಡಪ್ಪ ರಾಯಣ್ಣವರ, ನಾಗರಾಜ ದ್ಯಾಮನಕೊಪ್ಪ, ನಿಂಗನಗೌಡ ಹೊಸಮನಿ, ನಿಂಗಪ್ಪ ಶಿವಬಸಣ್ಣವರ, ಆರ್.ಸಿ. ಪಾಟೀಲ, ಮಲ್ಲೇಶ ದೊಳಮ್ಮನವರ ಸೇರಿ ಹಿರಿಯರು ಉಪಸ್ಥಿತರಿದ್ದರು.

ಜಾತ್ರಾಮಹೋತ್ಸವ ಅಂಗವಾಗಿ ಹುಬ್ಬಳ್ಳಿಯ ಆರ್.ಬಿ. ಪಾಟೀಲ ಕ್ಯಾನ್ಸರ್ ಆಸ್ಪತ್ರೆಯ ನೇತೃತ್ವದಲ್ಲಿ ರಕ್ತದಾನ ಶಿಬಿರ ನಡೆಯಿತು. ಅಣ್ಣಪ್ಪ ರಾಮಗೇರಿ ಪ್ರಾಸ್ತಾವಿಕ ಮಾತನಾಡಿದರು. ಸಂಜೆ ನೂತನ ರಥೋತ್ಸವ ಅಪಾರ ಭಕ್ತರ ಪಾಲ್ಗೊಳ್ಳುವಿಕೆಯೊಂದಿಗೆ ನೆರವೇರಿತು.

ಮಾಜಿ ಸಂಸದ ಮಂಜುನಾಥ ಕುನ್ನೂರ ಮಾತನಾಡಿ, ಅರಣ್ಯ ಪ್ರದೇಶದಲ್ಲಿದ್ದ ದುಂಡಿ ಬಸವೇಶ್ವರ ದೇವಸ್ಥಾನವನ್ನು ನೊಣವಿನಕೆರೆ ಶ್ರೀಗಳು ಸಾಕಷ್ಟು ಅಭಿವೃದ್ಧಿಪಡಿಸಿ ಧರ್ಮಕ್ಷೇತ್ರವನ್ನಾಗಿ ಮಾಡಿದ್ದಾರೆ. ಈಗ ಮುಕ್ತಿ ಮಂದಿರ ಧರ್ಮಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗ ಸ್ಥಾಪನೆಯ ಕಾರ್ಯ ಭರದಿಂದ ಸಾಗಿದ್ದು, ಈ ಪರಮ ಶ್ರೇಷ್ಠ ಕಾರ್ಯ ಪೂರ್ಣಗೊಂಡ ನಂತರ ಈ ಕ್ಷೇತ್ರವೂ ಮಹತ್ವ ಪಡೆದುಕೊಳ್ಳಲಿದೆ. ಧರ್ಮದ ಕಾರ್ಯದಿಂದ ಬದುಕು ಸುಂದರವಾಗುತ್ತದೆ. ಕೈಲಾದ ಮಟ್ಟಿನ ಅಳಿಲು ಸೇವೆ ಮಾಡೋಣ ಎಂದರು.

### ಜಾತಿ ಗಣತಿಯಲ್ಲಿ ಎಸ್‌ಎಸ್‌ಕೆ ಸಮಾಜಕ್ಕೆ ಅನ್ಯಾಯ: ವಿನೋದ ಶಿದ್ಲಿಂಗ್ ಅಸಮಾಧಾನ

## ಪ್ರತ್ಯಕ್ಷ ದತ್ತಾಂಶ ಕ್ರೋಢೀಕರಣವಾಗಿಲ್ಲ



■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಸಮಾಜ ರಾಜ್ಯಾದ್ಯಂತ ಎಂಟು ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿದೆಯಾದರೂ ಕೇವಲ 27 ಸಾವಿರ ಜನಸಂಖ್ಯೆ ಎಂದು ನಮೂದಿಸಿ ಎಸ್‌ಎಸ್‌ಕೆ ಸಮಾಜಕ್ಕೆ ಅನ್ಯಾಯ ಮಾಡಲಾಗಿದೆ ಎಂದು ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜ ಪಂಚ ಕಮಿಟಿ ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ್ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಬರುವ ಜಾತಿಗಣತಿಯಲ್ಲಿ ಪ್ರತಿ ಮನೆ ಮನೆಗೆ ತೆರಳಿ ಸ್ಪಷ್ಟವಾದ ಮಾಹಿತಿ ಪಡೆಯಬೇಕು.

ಕೇವಲ ಹುಬ್ಬಳ್ಳಿ, ಧಾರವಾಡದಲ್ಲಿ ಅಷ್ಟೇ 70ರಿಂದ 80 ಸಾವಿರ ಜನಸಂಖ್ಯೆ ಹೊಂದಿದ್ದೇವೆ. ಬೆಳಗಾವಿ, ಗದಗ, ಬಾದಾಮಿ, ಗಜೇಂದ್ರಗಡ ಸೇರಿದಂತೆ ರಾಜ್ಯಾದ್ಯಂತ ನಮ್ಮ ಸಮಾಜದವರಿದ್ದಾರೆ ಎಂದರು.

ಕಾಂತರಾಜ್ ಆಯೋಗ ಜೂ.27, 2014ರಲ್ಲಿ ಮೂರು ವರ್ಷಗಳ ಅವಧಿಗೆ ಜಾರಿಗೆ ಬಂದಿತು. ಆಯೋಗಕ್ಕೆ ವರದಿ ಪೂರ್ಣಗೊಳಿಸಲು ಅನುವು ಮಾಡಿಕೊಡಲು ಆಯೋಗದ ಅವಧಿ, ವಿಶೇಷವಾಗಿ ಅಧ್ಯಕ್ಷರ ಅಧಿಕಾರಾವಧಿಯನ್ನು ಹಲವು ಬಾರಿ ವಿಸ್ತರಿಸಲಾಯಿತು.

ಜಯಪ್ರಕಾಶ ಹೆಗಡೆಯವರು ಮನೆ ಮನೆಗೆ ತೆರಳಿ ಪ್ರತ್ಯಕ್ಷ ದತ್ತಾಂಶ ಕ್ರೋಢೀಕರಣ ಮಾಡಿಲ್ಲ. ಹತ್ತು ವರ್ಷಗಳ ನಂತರ ಸಮೀಕ್ಷೆಗಳನ್ನೊಳಗೊಂಡ ಮೂಲ ಪ್ರತಿ ಇಲ್ಲದೇ ಹಲವು ವಿವರಗಳನ್ನು ಕ್ರೋಢೀಕರಿಸಿ ಉತ್ತಮಪಡಿಸಿ ವರದಿಯನ್ನು ಸರಕಾರಕ್ಕೆ ಸಲ್ಲಿಸಲಾಗಿದೆ ಎಂದು ವಸಂತಸಾ ಲದ್ವಾ ಆಯೋಗಗಳ ವರದಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

▶▶3ನೇ ಪುಟಕ್ಕೆ

### ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಇಂದಿನಿಂದ ಅನಿರ್ದಿಷ್ಟಾವಧಿ ಧರಣಿ; ರವಿಕಾಂತ ಅಂಗಡಿ

# ಬಡ ರೈತರಿಗೆ ನ್ಯಾಯ ಒದಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿವಿಧ ಬೇಡಿಕೆಗಳ ಈಡೇರಿ-ಕೆಗೆ ಆಗ್ರಹಿಸಿ ಆ.19ರಂದು ಶಿರಹಟ್ಟಿಯ ಫಕ್ಕೀರೇಶ್ವರ ಮಠದಿಂದ ಗದಗ ಜಿಲ್ಲಾಡಳಿತ ಭವನದವರೆಗೆ ಪಾದಯಾತ್ರೆ ಮೂಲಕ ಬೃಹತ್ ಪ್ರತಿಭಟನೆ ನಡೆಸಿ, ಅನಿರ್ದಿಷ್ಟಾವಧಿ ಧರಣಿ ಆರಂಭಿಸಲಾಗುವುದು ಎಂದು ಉತ್ತರ ಕರ್ನಾಟಕ ಮಹಾಸಭಾದ ರಾಜ್ಯ ಘಟಕದ ಅಧ್ಯಕ್ಷ ರವಿಕಾಂತ ಅಂಗಡಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ನಾಗಾವಿ ಗ್ರಾಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ನಿರ್ಮಾಣಕ್ಕೆ ಭೂಸ್ವಾಧೀನ ಮಾಡಿಕೊಂಡು 9 ವರ್ಷಗಳು ಕಳೆದರೂ ರೈತರಿಗೆ ಪರಿಹಾರ ನೀಡಿಲ್ಲ. ಕೂಡಲೇ ಅವರಿಗೆ ಪರಿಹಾರ ನೀಡದಬೇಕು. ಇಲ್ಲವಾದರೆ, ಪರ್ಯಾಯ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು.



ರೈತರು ನೂರಾರು ವರ್ಷಗಳಿಂದ ತಮ್ಮ ಉಪಜೀವನಕ್ಕಾಗಿ ಜಮೀನು ಸಾಗುವಳಿ ಮಾಡುತ್ತ ಬಂದಿದ್ದಾರೆ. ಬಗರ್‌ಹುಕುಂ ಸಾಗುವಳಿದಾರರು, ಅರಣ್ಯ ಭೂಮಿ ಅವಲಂಬಿತರಿಗೆ ಹಕ್ಕುಪತ್ರ ನೀಡದೇ ವಿನಾಕಾರಣ ಕಿರುಕುಳ ನೀಡುತ್ತಿದ್ದಾರೆ. ತಾಲೂಕಿಗೆ ಒಂದು ನ್ಯಾಯ, ಇತರೆ ತಾಲೂಕಿನ ಜನರಿಗೆ ಒಂದು ನ್ಯಾಯವಾಗಿದೆ. ಜಿಲ್ಲಾ ಉಸ್ತುವಾರಿ ಎಚ್.ಕೆ. ಪಾಟೀಲರು ಹುಲಕೋಟಿ ಅಥವಾ ಗದಗ ತಾಲೂಕಿಗೆ ಮಾತ್ರ ಸೀಮಿತವಲ್ಲ. ಅರಣ್ಯ ಭೂಮಿ ಸಾಗುವಳಿ ಮಾಡುವ ರೈತರು ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಇದ್ದಾರೆ ಎನ್ನುವ ವಾಸ್ತವ ಅಂಶವನ್ನು ಅರ್ಥ ಮಾಡಿಕೊಂಡು ಅವರಿಗೆ ನ್ಯಾಯ ಒದಗಿಸಬೇಕು ಎಂದರು.

ವಿಶ್ವವಿದ್ಯಾಲಯ ಸ್ಥಾಪನೆ ಸಂಬಂಧ ಭೂಸ್ವಾಧೀನ ಮಾಡಿಕೊಳ್ಳುವಾಗ ದೊಡ್ಡವರ ಜಮೀನು ಪಡೆಯದೇ, ಸಣ್ಣ ಪುಟ್ಟ ರೈತರಿಗೆ ಆಸೆ ತೋರಿಸಿ ಜಮೀನು ಪಡೆದುಕೊಂಡಿದ್ದಾ-ರೆ. ಈ ಮೂಲಕ ದೊಡ್ಡವರ ಜಮೀನುಗಳಿಗೆ ಅನುಕೂಲ ಮಾಡಿಕೊಡಲಾಗಿದೆ. ಅಲ್ಲದೇ ಖಾಸಗಿ ಭೂಮಾಲೀಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಅವರೊಂದಿಗೆ ಶಾಮೀಲಾಗಿ 11 ಕೋಟಿ ಪರಿಹಾರ ಕೊಡಿಸಿ ಸರಕಾರಕ್ಕೆ ನಷ್ಟ ಉಂಟು ಮಾಡಿರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದರು.

ಸೋಲಾರ್ ಹಾಗೂ ಪವನ ವಿದ್ಯುತ್ ಕಂಪನಿಗಳಿಂದ ರೈತರಿಗೆ ಅನ್ಯಾಯವಾಗುತ್ತಿದ್ದು, ಇದನ್ನು ಪ್ರಶ್ನಿಸಲು ರೈತರಿಗೆ ಧ್ವನಿ ಇಲ್ಲದಂತಾಗಿದೆ. ಆಡಳಿತ ವ್ಯವಸ್ಥೆಯೂ ಇದರಿಂದ ದೂರ ಉಳಿದಿದೆ. ಪವನ ವಿದ್ಯುತ್ ಕಂಪನಿಗಳಿಂದ ಮೋಸಕ್ಕೆ ಒಳಗಾಗಿರುವ ರೈತರಿಗೆ ಜಿಲ್ಲಾಡಳಿತ ಸೂಕ್ತ ರೀತಿಯಲ್ಲಿ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಂಜುನಾಥ ಶಲವಡಿ, ಕೃಷ್ಣ ದೇಶಪಾಂಡೆ, ನಿಂಗಪ್ಪ ಪೂಜಾರಿ, ಫಿರೋಜ್ ನದಾಫ್, ನಬೀಸಾಬ್, ಮಹದೇವಪ್ಪ ಬೇವಿನಮರದ, ಪೀರ್‌ಸಾಬ್ ನದಾಫ್, ಮುಲ್ಲಾ ಸಾಬ್, ಮಲ್ಲಿಕ್‌ಸಾಬ್ ಇದ್ದರು.

ತಾಲೂಕಿನ ನರಸಾಪುರದಲ್ಲಿ ಕೆಐಎಡಿಬಿ 2ನೇ ಹಂತದ 216 ಎಕರೆ ಭೂಸ್ವಾಧೀನ ಕೈಬಿಟ್ಟು ರೈತರಿಗೆ ಜಮೀನು ಮರಳಿಸಬೇಕು. ಲಕ್ಷ್ಮೇಶ್ವರ ತಾಲೂಕಿನ ಯಲ್ಲಾಪುರ ಗ್ರಾಮದ ಹುಲ್ಲುಗಾವಲು ಸಾಗುವಳಿ ರೈತರಿಗೆ ಹಕ್ಕುಪತ್ರ ನೀಡಬೇಕು. ಶಾಸಕರ ನೇತೃತ್ವದ ಬಗರ್‌ಹುಕುಂ ಸಮಿತಿ ಇದ್ದೂ ಇಲ್ಲದಂತಾಗಿದೆ. ಸಮಿತಿ ಸಕ್ರಿಯವಾಗಿ ಕಾರ್ಯನಿರ್ವಹಿಸಿ ಅರ್ಹ ರೈತರಿಗೆ ಜಮೀನು ಮಂಜೂರು ಮಾಡಬೇಕು ಎಂದು ರವಿಕಾಂತ ಅಂಗಡಿ ಒತ್ತಾಯಿಸಿದರು.

## ಸಂಪಾದಕೀಯ

# ಹೆಚ್ಚುತ್ತಿರುವ ಸಾಲದ ಹೊರೆ: ಒಂದು ಗಂಭೀರ ಚಿಂತನೆ

ಕೇಂದ್ರ ಸರ್ಕಾರದ ಹೆಚ್ಚುತ್ತಿರುವ ಸಾಲದ ಪ್ರಮಾಣವು ದೇಶದ ಆರ್ಥಿಕತೆಯ ಮೇಲೆ ಆತಂಕ ಮೂಡಿಸುತ್ತಿದೆ. ಲೋಕಸಭೆಯ ಪ್ರಶ್ನೋತ್ತರ ಅವಧಿಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ನೀಡಿರುವ ಅಂಕಿ-ಅಂಶಗಳು ಈ ವಾಸ್ತವವನ್ನು ದೃಢಪಡಿಸುತ್ತವೆ.

2015-16ರಲ್ಲಿ 70.98 ಲಕ್ಷ ಕೋಟಿಯಷ್ಟಿದ್ದ ಸರ್ಕಾರದ ಸಾಲವು, 2025-26ರ ಹೊತ್ತಿಗೆ 200.16 ಲಕ್ಷ ಕೋಟಿಗೆ ಏರಿದೆ. ಕೇವಲ ಒಂದು ದಶಕದಲ್ಲಿ ಈ ಪ್ರಮಾಣದಲ್ಲಿನ ಹೆಚ್ಚಳ ಆರ್ಥಿಕ ಸ್ಥಿರತೆಯ ಕುರಿತು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಇದಲ್ಲದೆ, ಸಾಲಕ್ಕೆ ಪಾವತಿಸುತ್ತಿರುವ ಬಡ್ಡಿ ಕೂಡ ಅಗಾಧವಾಗಿದೆ. ಈ ವರ್ಷ ಸರ್ಕಾರ 4.61 ಲಕ್ಷ ಕೋಟಿ ಸಾಲ ಮರುಪಾವತಿ ಮಾಡಿದ್ದರೂ, ಬಡ್ಡಿಯ ರೂಪದಲ್ಲಿ 12.76 ಲಕ್ಷ ಕೋಟಿ ಪಾವತಿಸಬೇಕಿದೆ. ಬಡ್ಡಿ ಪಾವತಿಗಾಗಿ ಖರ್ಚಾಗುತ್ತಿರುವ ಈ ಬೃಹತ್ ಮೊತ್ತವು, ಮೂಲಸೌಕರ್ಯ ಅಭಿವೃದ್ಧಿ, ಶಿಕ್ಷಣ, ಆರೋಗ್ಯ ಮತ್ತು ಇತರ ಕಲ್ಯಾಣ ಯೋಜನೆಗಳಿಗೆ ಬಳಸಬಹುದಾದ ಸಂಪನ್ಮೂಲಗಳನ್ನು ನುಂಗಿಹಾಕುತ್ತಿದೆ.

ಸರ್ಕಾರಗಳು ಸಾಲ ಮಾಡುವುದು ಹೊಸ ವಿಷಯವಲ್ಲ. ಆದರೆ, ಆ ಸಾಲವನ್ನು ಉತ್ಪಾದಕ ವಲಯಗಳಲ್ಲಿ ಹೂಡಿಕೆ ಮಾಡಿದಾಗ ಮಾತ್ರ ಅದು ಆರ್ಥಿಕ ಬೆಳವಣಿಗೆಗೆ ಸಹಾಯಕವಾಗುತ್ತದೆ. ಬದಲಾಗಿ, ಸಾಲವು ಕೇವಲ ಆಡಳಿತಾತ್ಮಕ ವೆಚ್ಚಗಳನ್ನು ಭರಿಸಲು ಅಥವಾ ಅನುತ್ಪಾದಕ ಯೋಜನೆಗಳಿಗೆ ಹೋದರೆ, ಅದು ದೇಶದ ಆರ್ಥಿಕ ಭವಿಷ್ಯಕ್ಕೆ ಮಾರಕವಾಗುತ್ತದೆ.

ಈ ಸಾಲದ ಹೊರೆಯು ಇಂದಿನ ತಲೆಮಾರಿನ ಜೊತೆಗೆ ಮುಂದಿನ ತಲೆಮಾರಿಗೂ ವರ್ಗಾವಣೆಯಾಗುತ್ತದೆ. ಆರ್ಥಿಕ ಶಿಸ್ತನ್ನು ಕಾಪಾಡಿಕೊಳ್ಳುವುದು ಮತ್ತು ಅನಗತ್ಯ ವೆಚ್ಚಗಳಿಗೆ ಕಡಿವಾಣ ಹಾಕುವುದು ಸರ್ಕಾರದ ಆದ್ಯತೆಯಾಗಬೇಕು. ಇಲ್ಲವಾದರೆ, ಬೃಹತ್ ಸಾಲದ ಸುಳಿಗೆ ಸಿಲುಕಿದ ದೇಶವು ಆರ್ಥಿಕ ಪ್ರಗತಿಯ ಪಥದಿಂದ ದೂರ ಸರಿಯಬಹುದು. ಈ ಬಗ್ಗೆ ಸರ್ಕಾರ ಮತ್ತು ನಾಗರಿಕರು ಎಚ್ಚೆತ್ತುಕೊಳ್ಳಬೇಕಾದ ಅವಶ್ಯಕತೆ ಇದೆ.

**ಆಗಸ್ಟ್ 19, ವಿಶ್ವ ಛಾಯಾಗ್ರಹಣ ದಿನಾಚರಣೆ ನಿಮಿತ್ತ ಲೇಖನ**

# ಇರಲಿ ಮನೆಗೊಂದು ಫೋಟೋ ಆಲ್ಬಂ



ವಿಶ್ವ ಛಾಯಾಗ್ರಹಣ ದಿನವು 19ನೇ ಆಗಸ್ಟ್ 1939ರಲ್ಲಿ ಇತಿಹಾಸ ಪ್ರಸಿದ್ಧ ಫ್ರೆಂಚ್ ಅಕಾಡೆಮಿ ಆಫ್ ಸೈನ್ಸಸ್ ಮೊಟ್ಟ ಮೊದಲನೇ ಡಾಗರೋ ಟೈಪ್ ಛಾಯಾಚಿತ್ರ ಪ್ರದರ್ಶಿಸಿದಾಗಿನಿಂದ ಪ್ರಾರಂಭವಾಗಿದೆ. ಅಂದು ಪ್ರದರ್ಶಿಸಿದ ಆ ಛಾಯಾಚಿತ್ರವು ತಾಮ್ರದ ಹಾಳೆಯ ಮೇಲೆ ಬೆಳ್ಳಿಯ ಲೇಪನದಿಂದಾದ ಮೊಟ್ಟಮೊದಲ ಛಾಯಾಚಿತ್ರವಾಗಿತ್ತು. ಆ ಪ್ರದರ್ಶನ ಮುಂದಿನ ದಿನಮಾನಗಳಲ್ಲಿ ಛಾಯಾಚಿತ್ರ ತೆಗೆಯುವ ಹವ್ಯಾಸ, ದೃಗ್ ವಿಜ್ಞಾನದಲ್ಲಿ ಒಂದು ಮಹತ್ತರ ಸಾಧನೆ ಮಾಡುವುದರೊಂದಿಗೆ, ಇಂದು ಟ್ರಿಲಿಯನ್‌ಗೂ ಮೀರಿ ಒಂದು ದೇಶದ ಆರ್ಥಿಕತೆಯನ್ನು ಬೆಳೆಸುವಲ್ಲಿ ಸಹಾಯವಾಗಿದೆ.

ಪ್ರತಿ ವರ್ಷ ವಿಶ್ವ ಛಾಯಾಗ್ರಹಣ ದಿನದಂದು ಉತ್ತಮ ಛಾಯಾಗ್ರಾಹಕರು, ಕ್ಯಾಮರಾ ತಯಾರಕರು, ಛಾಯಾಚಿತ್ರ ಮುದ್ರಿಸುವವರು ಹಾಗೂ ಆಸಕ್ತರು ಜತೆಕೂಡಿ ಒಂದೆಡೆ ಸೇರಿ ತಮ್ಮ ಆಲೋಚನೆ, ನಾವೀನ್ಯತೆಗಳು ಮತ್ತು ಛಾಯಾಚಿತ್ರ ಕಲೆಯಲ್ಲಿಯ ಅವಿಷ್ಕಾರಗಳನ್ನು ಚರ್ಚಿಸಿ ಅವುಗಳಿಗೆ ಸಂಬಂಧಿಸಿದ ಕಲಾಕೃತಿಗಳನ್ನು ಪ್ರದರ್ಶಿಸುವುದರೊಂದಿಗೆ ಹೊಸ ಹೊಸ ಗುತ್ತಿಗೆಗಳನ್ನು ಪಡೆದು ತಾವು ಕ್ಲಿಕ್ಕಿಸಿದ ಛಾಯಾಚಿತ್ರಗಳನ್ನು ಕಲಾಪೋಷಕರಿಗೆ ನೀಡಿ ತಮ್ಮ ಆದಾಯವನ್ನು ಪಡೆದುಕೊಳ್ಳುತ್ತಾರೆ. ಇಲ್ಲಿ ಭೂದೃಶ್ಯಗಳು, ಕ್ಯಾಮರಾ ಕಣ್ಣಿನಿಂದ ಕ್ಲಿಕ್ಕಿಸಿದ ಅಪರೂಪದ ನಂಬಲಾಗದ ದೃಶ್ಯಗಳು ಹಾಗೂ ನಿಸರ್ಗದ ಆಶ್ಚರ್ಯಗಳು, ಸಾಮಾಜಿಕ, 'ರಾಜಕೀಯ ಸನ್ನಿವೇಶಗಳು ಇತ್ಯಾದಿ ಒಳಗೊಂಡಿರುತ್ತವೆ. ಆದರೆ ಇವೆಲ್ಲವುಗಳನ್ನು ಮೀರುವಂತೆ ವಿಜ್ಞಾನ-ತಂತ್ರಜ್ಞಾನದ ಕೆಲವು ವಿಶೇಷತೆ, ವ್ಯೋಮ ವಿಜ್ಞಾನಕ್ಕೆ ಸಂಭಂದಿಸಿದ ಮಾನವ ರಹಿತ ಛಾಯಾಚಿತ್ರಗಳನ್ನು ಒಳಗೊಂಡಿರುತ್ತವೆ.

ವಿಶ್ವದ ಮೊದಲ ಶಾಶ್ವತ ಛಾಯಾಚಿತ್ರವನ್ನು ತೆಗೆದು-ಕೊಂಡ ಕ್ಯಾಮರಾವನ್ನು ಫ್ರಾನ್ಸ್‌ನ ನೈಸೆಫೋರ್ ನಿಪ್ಸೆ ಎಂಬುವವರು ತಯಾರಿಸಿದರು. ಕ್ಯಾಮರಾ ಮೂಲವಾಗಿ ಮಾನವನ ಕಣ್ಣಿನ ರಚನೆಯನ್ನು ಹೋಲುತ್ತದೆ. ನಂತರ ಹಲವಾರು ವಿವಿಧ ತಂತ್ರಜ್ಞಾನ ಹೊಂದಿದ ಕ್ಯಾಮರಾಗಳನ್ನು ಕಂಡು ಹಿಡಿಯಲಾಗಿದೆ. ಛಾಯಾಚಿತ್ರಗಳು ನೆರಳು-ಬೆಳಕಿನ ಆಟ ಅಥವಾ ನೆರಳು-ಬೆಳಕಿನ ವಿದ್ಯಮಾನಗಳಾಗಿವೆ. ಮೊದಲನೇ ಛಾಯಾಚಿತ್ರವನ್ನು 1826ರಲ್ಲಿ ಆಕಸ್ಮಿಕವಾಗಿ ತೆ-ಗೆದುಕೊಂಡದ್ದಾದರೂ, ಮೊದಲ ಡಿಜಿಟಲ್ ಛಾಯಾಚಿತ್ರ 1975ರಲ್ಲಿ ಕೊಡಾಕ್ ಉದ್ಯೋಗಿ ಸ್ಟೀವ್ ಸ್ಯಾಸನ್ ಕ್ಲಿಕ್ಕಿಸಿದ್ದರು. ಮೊದಲ ರಂಗಿನ ಛಾಯಾಚಿತ್ರವನ್ನು 1861ರಲ್ಲಿ ಚಿತ್ರೀಕರಿಸಿಕೊಂಡಿದ್ದಾರೆ.

ಭಾರತದ ಹಲವಾರು ಛಾಯಾಚಿತ್ರಗಾರರು ರಾಷ್ಟ್ರೀಯ, ಅಂತಾರಾಷ್ಟ್ರೀಯ ಪಾರಿತೋಷಕಗಳನ್ನು ಗಳಿಸಿದ್ದಾರೆ. ಅವರಲ್ಲಿ ಇತ್ತೀಚೆಗೆ ಅಂತಾರಾಷ್ಟ್ರೀಯ ಪ್ರಶಸ್ತಿ ಪಡೆದವರೆಂದರೆ, ದಕ್ಷ ಶರ್ಮಾ, ಬಾರ್ಬೇರಾ ಝುನನ್, ಕ್ಲಾರೆನ್ಸ್ ಲಿನ್, ಲಿಂಡಾದೆ ನೋಬೀಲ್ಲಿ ಇನ್ನೂ ಹಲವಾರು ಕಲಾಕಾರರಿದ್ದಾರೆ. ಅಂದು ಕತ್ತಲೆಯಲ್ಲಿ ತೆಗೆ-ಯುತ್ತಿದ್ದ ಛಾಯಾಚಿತ್ರಗಳು ಇಂದು ಹೊರಾಂಗಣ, ಅರ್ಧ ಬೆಳಕಿನಲ್ಲಿ, ಜಲಾಂತರ್ಗಾಮಿಯಾಗಿ, ಏರೋಶೂಟ್, ಸೆಲ್ಫಿ ಹೀಗೆ ಹಲವಾರು ಆಯಾಮಗಳನ್ನು ಪಡೆದುಕೊಂಡಿದೆ.

ಛಾಯಾಗ್ರಹಣವು ಒಂದು ಕಲೆ. ಕ್ಯಾಮರಾ ಕೈಯಲ್ಲಿದ್ದವರೆಲ್ಲರೂ ಉತ್ತಮ ಛಾಯಾಗ್ರಾಹಕರಾಗಲಾರರು. ಅದಕ್ಕೆ ಸಮಯ, ತಾಳ್ಮೆ, ಬೆಳಕಿನ ವರ್ತನೆಯ ಗುಣಧರ್ಮ ಹಾಗೂ ಯಾವ ಕೋನದಲ್ಲಿ ವಿಭಿನ್ನವಾದ ಕೌಶಲ್ಯದಿಂದ ಕ್ಲಿಕ್ಕಿಸಿದರೆ ಅಪರೂಪದ ಹಾಗೂ ಅನನ್ಯವಾದ ಛಾಯಾಚಿತ್ರ ಬರಲು ಸಾಧ್ಯ ಎಂಬುದನ್ನು ಛಾಯಾಗ್ರಾಹಕನು ಅರಿತಿರಬೇಕಾಗುತ್ತದೆ.

ಮನುಷ್ಯನಿಗೆ ಎಲ್ಲಿಯೂ ಸುಖ-ನೆಮ್ಮದಿ ದೊರೆಯದ್ದಿದ್ದಾಗ ಹಳೆಯ ಫೋಟೊ ಸಂಗ್ರಹಗಳನ್ನು ತೆಗೆದು ನೋಡುತ್ತ ಕುಳಿತರೆ ತಾನು ಅಷ್ಟು ಹಿಂದೆ ಹೋಗಿ ಅಂದಿನ ಕಾಲದಲ್ಲಿ ವಿಹರಿಸಿ, ಮೊಗದಲ್ಲಿ ಮಂದಹಾಸ ಮೂಡುತ್ತದೆ. ಇಂದಿನ ಯುಗದಲ್ಲಿ ಅವೇ ಛಾಯಾಚಿತ್ರಗಳನ್ನು ಇಲೆಕ್ಟ್ರಾನಿಕ್ ಮಾಧ್ಯಮದಿಂದ ಆತ್ಮೀಯರೊಂದಿಗೆ ಹಂಚಿಕೊಂಡಾಗ ಅಗುವ ಆನಂದ, ಸಂತೃಪ್ತಿ ಅಷ್ಟಿಷ್ಟಲ್ಲ. ಅದಕ್ಕೆ ಮನೆಗೊಂದು ಧರ್ಮಗ್ರಂಥದ ಅವಶ್ಯಕತೆ ಇದ್ದಂತೆ ಮನೆಗೊಂದು ಅಲ್ಬಂ ಇರಬೇಕು. ಅಂದರೆ ನಾವು ನಮ್ಮ ಅಮೂಲ್ಯವಾದ ಕ್ಷಣಗಳನ್ನು ಛಾಯಾಚಿತ್ರಗಳಲ್ಲಿ ಜೀವಂತವಾಗಿಟ್ಟುಕ್ಕೊಳ್ಳಲು ಸಾಧ್ಯ.

ಇಂತಹ ಅಮೂಲ್ಯವಾದ ಕಲೆಯನ್ನು ಪೂಜಿಸಿ ಪೋಷಿಸಿದ ಗದುಗಿನ ಅಂದಿನ ಮುನವಳ್ಳಿ, ಗುಡಿ, ಸುರೇಶ ಫೋಟೊಗ್ರಾಫರ್ ಹಾಗೂ ಇಂದಿಗೂ ಅದೇ ಸೇವೆಯಲ್ಲಿರುವ ಮುಂಡರಗಿ, ಮಹೇಂದ್ರಕರ್ ಮನೆತನದವರು ಹುಬ್ಬಳ್ಳಿ-ಧಾರವಾಡದ ಸಾಲಿ, ಮಿಸ್ಕಿನ್ ಮನೆತನದವರನ್ನು ಈ ಭಾಗದ ಜನರು ಧನ್ಯತೆಯಿಂದ ನೆನೆಸಿಕೊಳ್ಳುತ್ತಾರೆ.

ಇದೇ ರೀತಿ ಛಾಯಾಗ್ರಹಣವು ಇನ್ನಷ್ಟು ಅಭಿವೃದ್ಧಿ ಹೊಂದಿ ವರ್ತಮಾನದ ಸವಿ ನೆನಪುಗಳನ್ನು ಭವಿಷ್ಯತ್ತಿನಲ್ಲಿ ಮೆಲಕು ಹಾಕುವಂತೆ ಮಾಡಲಿ ಎಂದು ಹಾರೈಸುತ್ತೇನೆ.

**- ರಾಮಚಂದ್ರ ಮೋನೆ.**
**ನಿವೃತ್ತ ವಿಜ್ಞಾನ ಶಿಕ್ಷಕರು, ಗದಗ.**

**ಲಕ್ಕುಂಡಿಯಲ್ಲಿ ಸಂಭ್ರಮದ ಸ್ವಾತಂತ್ರ್ಯೋತ್ಸವ ಆಚರಣೆ, ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ**

# ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ವಿವಿಧ ಶಾಲಾ ಕಾಲೇಜು, ಸಂಘ-ಸಂಸ್ಥೆಗಳು ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ 79ನೇ ಸ್ವಾತಂತ್ರ್ಯೋತ್ಸವವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.



ಗ್ರಾಮ ಪಂಚಾಯಿತಿಯಲ್ಲಿ ಧ್ವಜಾರೋಹಣವನ್ನು ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ನೆರವೇರಿಸಿದರು. ಪ್ರಾಥಮಿಕ, ಪ್ರೌಢಶಾಲೆಯ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ಇದೇ ಸಂದರ್ಭದಲ್ಲಿ ರಾಷ್ಟ್ರಮಟ್ಟದ ಕರಾಟೆ ಸ್ಪರ್ದೆಯಲ್ಲಿ ಭಾಗವಹಿಸಿದ ಕ್ರೀಡಾಪಟುಗಳಿಗೆ ಹಾಗೂ ಸಮಾಜ ಸೇವಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಗ್ರಾ.ಪಂ ಸರ್ವ ಸದಸ್ಯರು ಹಾಜರಿದ್ದರು. ಪಿ.ಡಿ.ಓ ಅಮೀರನಾಯಕ ಸ್ವಾಗತಿಸಿ ನಿರೂಪಿಸಿದರು.

ಬಾಲಕಿಯರ ಸರಕಾರಿ ಪ್ರೌಢಶಾಲೆಯ ಧ್ವಜಾರೋಹಣವನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ರಮಜಾನಸಾಬ ತಹಸೀಲ್ದಾರ ನೆರವೇರಿಸಿದರು. ಪ್ರತಿಭಾವಂತ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗೆ ಕೆನರಾ ಬ್ಯಾಂಕ್ ವ್ಯವಸ್ಥಾಪಕರು ಶಿಷ್ಯ ವೇತನ ನೀಡಿದರು. ಸದಸ್ಯರು, ಶಿಕ್ಷಕರು ಹಾಜರಿದ್ದರು.

ಸರಕಾರಿ ಮಾದರಿಯ ದ್ವಿಭಾಷಾ ಮಾಧ್ಯಮ ಪ್ರಾಥಮಿಕ ಶಾಲೆಯಲ್ಲಿ ಧ್ವಜಾರೋಹಣವನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ಗವಿಶಿದ್ದಪ್ಪ ಯಲಿಶಿರುಂದ ನೆರವೇರಿಸಿದರು.

ಶ್ರೀ ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಧ್ವಜಾರೋಹಣವನ್ನು ಹಿರಿಯ ಶಿಕ್ಷಕಿ ಪ್ರಮೀಳಾ ಅಂಗಡಿ ನೆರವೇರಿಸಿದರು. ಸ್ತ್ರೀರೋಗ ವೈದ್ಯೆ ವೈಶಾಲಿ ಬಿರಾದಾರ ಸೇರಿದಂತೆ ಶಿಕ್ಷಕ ಬಳಗದವರು ಹಾಜರಿದ್ದರು.

ಸರಕಾರಿ ಹಿರಿಯ ಹೆಣ್ಣು ಮಕ್ಕಳ ಶಾಲೆಯ ಧ್ವಜಾರೋಹಣವನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ನಾಗರಾಜ ಖಂಡು ನೆರವೇರಿಸಿದರು. ಗ್ರಾ.ಪಂ ಸದಸ್ಯರು, ಎಸ್.ಡಿ.ಎಂ.ಸಿ ಸದಸ್ಯರು, ಶಿಕ್ಷಕ ಬಳಗದವರು ಹಾಜರಿದ್ದರು.

ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ 1ರ ಧ್ವಜಾರೋಹಣವನ್ನು ಸಂಘದ ಅಧ್ಯಕ್ಷ ನಿಂಗಪ್ಪ ಗಡಗಿ ನೆರವೇರಿಸಿದರು. ನಿರ್ದೇಶಕರು, ಶಿಕ್ಷಕರು ಹಾಜರಿದ್ದರು.

ಸರಕಾರಿ ಹಿರಿಯ ಪ್ರಾಥಮಿಕ ಉರ್ದು ಶಾಲೆಯ ಧ್ವಜಾರೋಹಣವನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ಮಹ್ಮದರಪೀಕ ಹುಬ್ಬಳ್ಳಿ ನೆರವೇರಿಸಿದರು. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ.3ರ ಧ್ವಜಾರೋಹಣವನ್ನು ಅಧ್ಯಕ್ಷ ಕಳಕಪ್ಪ ಟೆಂಗಿನಕಾಯಿ ನೆರವೇರಿಸಿದರು. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ.2ರ ಧ್ವಜಾರೋಹಣವನ್ನು ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ ನೆರವೇರಿಸಿದರು. ನಿರ್ದೇಶಕರಾದ ಮಲ್ಲನಗೌಡ ಪಾಟೀಲ, ಗವಿಶಿದ್ದಪ್ಪ ರೇವಡಿ, ಕಲ್ಲಪ್ಪ ಬೆಟಗೇರಿ, ಶಂಕ್ರಪ್ಪ ಕುಂಬಾರ, ಅಂದಾನಯ್ಯ ಪತ್ರಿಮಠ, ಫಕ್ಕೀರಯ್ಯ ಪತ್ರಿಮಠ, ಅನ್ನಪೂರ್ಣ ಹಡಗಲಿ, ನೀಲವ್ವ ರವದಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಬಿ. ಬೆಣಕಲ್ಲ ಸೇರಿದಂತೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಧ್ವಜಾರೋಹಣವನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ಮರಿಯಪ್ಪ ವಡ್ಡರ ನೆರವೇರಿಸಿದರು. ಪ್ರಧಾನ ಗುರುಗಳು, ಸಹ ಶಿಕ್ಷಕರು, ಸದಸ್ಯರು ಹಾಜರಿದ್ದರು. ಅಂಬೇಡ್ಕರ ನಗರದ ಧ್ವಜಾರೋಹಣವನ್ನು ಭೀಮಪ್ಪ ಪೂಜಾರ ನೆರವೇರಿಸಿದರು. ನಗರದ ಯುವಕರು, ಹಿರಿಯರು, ಶಾಲಾ ಮಕ್ಕಳು ಪಾಲ್ಗೊಂಡಿದ್ದರು. ಮಾರುತಿ ನಗರದ ಬಿ.ಎಚ್. ಪಾಟೀಲ ಸಂಯುಕ್ತ ಪದವಿ ಕಾಲೇಜಿನ ಧ್ವಜಾರೋಹಣವನ್ನು ಜನತಾ ವಿದ್ಯಾವರ್ಧಕ ಸಂಸ್ಥೆಯ ಅಧ್ಯಕ್ಷ ಈಶ್ವರಪ್ಪ ಕುಂಬಾರ ನೆರವೇರಿಸಿದರು. ಪ್ರಾಚಾರ್ಯ ಎಸ್.ಬಿ. ಪಾಟೀಲ, ಪ್ರೌಢಶಾಲೆಯ ಹಿರಿಯ ಶಿಕ್ಷಕ ಎ.ಎನ್. ಪೂಜಾರ, ನಿರ್ದೇಶಕ ಮಂಡಳಿಯ ಸರ್ವ ಸದಸ್ಯರು, ಶಿಕ್ಷಕ ವರ್ಗ ಹಾಜರಿದ್ದರು.

ಮಾರುತಿ ನಗರದ ಸರಕಾರಿ ಮಾದರಿಯ ದ್ವಿಭಾಷಾ ಪ್ರಾಥಮಿಕ ಶಾಲೆಯ ಧ್ವಜಾರೋಹಣವನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಾಂತೇಶ ಗುರಿಕಾರ ನೆರವೇರಿಸಿದರು. ಕೆನರಾ ಬ್ಯಾಂಕ್ ವ್ಯವಸ್ಥಾಪಕರು ಎಸ್.ಸಿ/ಎಸ್.ಟಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ 3 ಸಾವಿರ ರೂ ಶಿಷ್ಯವೇತನ ನೀಡಿದರು. ಗ್ರಾ.ಪಂ ಸದಸ್ಯರು, ಎಸ್.ಡಿ.ಎಂ.ಸಿ ಸದಸ್ಯರು, ಮುಖ್ಯೋಪಾಧ್ಯಾಯ ಕೆ.ಬಿ. ಕೊಣ್ಣೂರು, ಶಿಕ್ಷಕರು ಹಾಜರಿದ್ದರು.

# ಶರಣರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಶರಣರು ನೆಲೆಸಿದ ಕ್ಷೇತ್ರವು ಪಾವನ ಕ್ಷೇತ್ರವಾಗುವುದು ಎಂದು ತುಪ್ಪದ ಕುರಹಟ್ಟಿಯ ವಾಗೀಶ ಪಂಡಿತ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಅವರು ಪಟ್ಟಣ ಸಮೀಪದ ಹೊಸಳ್ಳಿ ಬೂದೀಶ್ವರ ಮಠದ ಆವರಣದಲ್ಲಿ ಬೂದೀಶ್ವರ ಪವಾಡ ಕಲಾಪ್ರತಿಮೆ ಲೋಕಾರ್ಪಣೆ ನೆರವೇರಿಸಿ ಮಾತನಾಡಿ, ಬೂದೀಶ್ವರ ಸ್ವಾಮಿಗಳು ಹಲವಾರು ಪವಾಡಗಳನ್ನು ಮಾಡುತ್ತಾ ಹೊಸಳ್ಳಿ ಬೂದೀಶ್ವರ ತಪೋ ಭೂಮಿಯಲ್ಲಿ ನೆಲೆಸಿದರು. ಈ ಪುಣ್ಯ ಭೂಮಿಯನ್ನು ಮತ್ತಷ್ಟು ಪಾವನಗೊಳಿಸಲು ಅಭಿನವ ಬೂದೀಶ್ವರ ಮಾಹಾಸ್ವಾಮಿಗಳು ಶಿಕ್ಷಣ ಕ್ರಾಂತಿ ಹಾಗೂ ಧರ್ಮ ಕ್ರಾಂತಿ ನೆರವೇರಿಸುತ್ತಿರುವುದು ಶ್ಲಾಘನೀಯ.

ಇಂತಹ ಸಂತರು, ಶರಣರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗುವುದರಿಂದ ಪ್ರತಿಯೊಬ್ಬರ ಜೀವನ ಪಾವನವಾಗುತ್ತದೆ ಎಂದರು.

ಸಾನ್ನಿಧ್ಯವನ್ನು ಅಭಿನವ ಬೂದೀಶ್ವರ ಮಾಹಾಸ್ವಾಮೀಜಿ ವಹಿಸಿಕೊಂಡಿದ್ದರು. ಡಾ. ಶರಣಬಸವ ವೆಂಕಟಾಪೂರ, ಅಪ್ಪಣ್ಣಾ ಇನಾಮತಿ, ಸಚಿನ ಪಾಟೀಲ, ಅಡಿವೆಪ್ಪಾ ತಿರ್ಲಾಪೂರ, ಭೀಮರೆಡ್ಡಿ ತಿರ್ಲಾಪೂರ, ಬಸವರಾಜ ತಿರ್ಲಾಪೂರ, ರವಿಗೌಡ ತಿರ್ಲಾಪೂರ, ಸಂಗಪ್ಪ ಬ್ಯಾಹಟ್ಟಿ, ಶಿವಪೂಜ ಅಕ್ಕಿ, ಹನುಮರೆಡ್ಡಿ ಚಾಕಲಬ್ಬಿ, ಹೋನ್ನಪ್ಪ ಹಳ್ಳಿ, ಉಳಿವಪ್ಪ ಅಂಗಡಿ, ಗಂಗಾಧರ ಬ್ಯಾಹಟ್ಟಿ ಹಾಗೂ ಬೂದೀಶ್ವರ ಸ್ವಾಮಿಗಳ ಮಠದ ಸದ್ಭಕ್ತರು ಇದ್ದರು.

# ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.2ರಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ರಮೇಶ ಹಾರೋಗೇರಿ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ನೆರವೇರಿಸಿದರು.

ಶಾಲಾ ಪ್ರಧಾನ ಗುರು ಎಸ್.ಎ. ಶ್ಯಾಗೋಟಿ, ಎಸ್‌ಡಿಎಂಸಿ ಉಪಾಧ್ಯಕ್ಷೆ ಶಿವಲೀಲಾ ಅಕ್ಕಿ, ಸದಸ್ಯರಾದ ದಾವಲಪ್ಪ ಚಾಕಲಬ್ಬಿ, ಫಕ್ಕೀರಪ್ಪ ಕರಡಿ, ಮಾಹಾಂತೇಶ ಜಾಲಣ್ಣವರ, ರೇಷ್ಮಾ ಶೇಖ, ಮೈಮುನ್ನಿಸಾ ನರಗುಂದ, ಅಲೀಮಾ ಸುಂಕದ, ಇಮಾಮಸಾಬ ಒಂಟಕುದುರಿ, ಅನ್ನಪೂರ್ಣಾ ಜುಮ್ಮಣ್ಣವರ, ರೇಖಾ ಸುಲಾಖೆ, ಬಸವರಾಜ ಮೆಣಸಿನಕಾಯಿ, ಈರಪ್ಪ ಸನ್ನಿ, ಚಂದ್ರು ಜುಮ್ಮಣ್ಣವರ, ಶೃತಿ ಕೆಳಗೇರಿ, ಶಶಿಕಲಾ ಮಠದವರ, ದ್ಯಾಮವ್ವ ದೊಡ್ಡಮನಿ, ಶಾಲಾ ಶಿಕ್ಷಕರ ವೃಂದದವರು, ವಿದ್ಯಾರ್ಥಿಗಳು ಇದ್ದರು.

**ಹಾಲಕೆರೆಯಲ್ಲಿ ಸ್ವಾತಂತ್ರ್ಯೋತ್ಸವ ದಿನದಂದು ಟ್ರಾಕ್ಟರ್ ವಿತರಣೆ**

# ರೈತರ ಸ್ವಾವಲಂಬಿ ಬದುಕಿಗೆ ನೆಲೆ ಸಿಕ್ಕಿದೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಹಾಲಕೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದಲ್ಲಿ ಆಗಸ್ಟ್ 15ರಂದು ಮೂವರು ರೈತರಿಗೆ ಟ್ರಾಕ್ಟರ್‌ಗಳನ್ನು ವಿತರಿಸುವ ಮೂಲಕ ಸ್ವಾತಂತ್ರ್ಯೋತ್ಸವವನ್ನು ವೈಶಿಷ್ಟ್ಯಪೂರ್ಣವಾಗಿ ಆಚರಿಸಲಾಯಿತು.



ಸಂಘದ ಅಧ್ಯಕ್ಷ ಅಂದಾನಗೌಡ ಪಾಟೀಲ ಧ್ವಜಾರೋಹಣ ನೆರವೇರಿಸಿ, ರೈತರಿಗೆ ಟ್ರಾಕ್ಟರ್‌ಗಳನ್ನು ವಿತರಿಸಿ ಮಾತನಾಡಿ, ಇಂದು ನಮಗೆಲ್ಲ ಸುದಿನ. ನಮಗೆ ಸ್ವಾತಂತ್ರ್ಯ ಸಿಕ್ಕು ಇಂದಿಗೆ 79ನೇ ವರ್ಷದಲ್ಲಿ ಕಾಲಿರಿಸಿದ್ದೇವೆ. ಇಷ್ಟು ವರ್ಷಗಳಲ್ಲಿ ನಮ್ಮ ದೇಶವು ಎಲ್ಲ ರಂಗಗಳಲ್ಲಿ ಸಾಕಷ್ಟು ಪ್ರಗತಿಯನ್ನು ಸಾಧಿಸಿದ್ದು, ಇನ್ನೂ ಸಾಧನೆಯ ಹಾದಿಯಲ್ಲಿ ಮುಂದುವರೆದಿದೆ ಎಂದರು.

ಸದ್ಯ ರಾಜ್ಯದಲ್ಲಿ ಅಧಿಕಾರದಲ್ಲಿರುವ ಸಿದ್ದರಾಮಯ್ಯ ನೇತೃತ್ವದ ಸರಕಾರವು ಬಡವರಿಗೆ ಅನುಕೂಲವಾಗಲೆಂದೇ ಅನೇಕ ಯೋಜನೆಗಳನ್ನು ಜಾರಿಗೊಳಿಸುವುದರ ಜೊತೆಗೆ ಐದು ಗ್ಯಾರಂಟಿಗಳನ್ನು ನೀಡಿದೆ. ರೈತರ ಸಲುವಾಗಿ ಹಲವಾರು ಯೋಜನೆಗಳನ್ನು ಕೈಗೊಂಡಿರುವ ಸರಕಾರ ರೈತರ ಸ್ವಾವಲಂಬಿ ಬದುಕಿಗೆ ಸೂಕ್ತ ನೆಲೆ ಒದಗಿಸಲು ಕೃಷಿ ಪತ್ತಿನ ಸಹಕಾರಿ ಸಂಘಗಳ ಮೂಲಕವೂ ಅನೇಕ ಸೌಲಭ್ಯಗಳನ್ನು ನೀಡುತ್ತಿದೆ ಎಂದರು.

ರೈತರಾದ ಸೋಮನಗೌಡ ಯಲ್ಲಪ್ಪಗೌಡ್ರ, ಅಂದೇಶ ಶಿರೂರ ಮತ್ತು ಈರಪ್ಪ ಸೂಡಿ ಟ್ರಾಕ್ಟರ್ ಪಡೆದುಕೊಂಡರು. ವೇದಿಕೆಯ ಮೇಲೆ ಮುಖ್ಯ ಶಿಕ್ಷಕಿ ಎಸ್. ಎಸ್. ಚುಂಚಾ, ಮುಖ್ಯ ಶಿಕ್ಷಕ ಎಚ್.ಎಸ್. ಬಿಂಗಿ, ಜಿ.ಎಸ್. ಬಲಕುಂದಿ ಇದ್ದರು.

ಇದೇ ಸಂದರ್ಭದಲ್ಲಿ ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಸಂಗದ ನಿರ್ದೇಶಕರಾದ ಎ.ಎಂ. ಪಾಟೀಲ, ಎಂ.ಎಲ್. ಕಳ್ಳಿಗುಡ್ಡ, ಎಸ್.ಬಿ. ಗೆದಗೇರಿ, ಬಿ.ಎಚ್. ಮೂಲಿಮನಿ, ಕೆ.ಆರ್. ಮಡಿವಾಳರ, ಮುಖಂಡರಾದ ಅಂದಪ್ಪ ತೋಟದ, ಭೀಮಪ್ಪ ಚಲವಾದಿ, ಸೋಮರಡ್ಡಿ ದಂಡಮ್ಮನವರ, ಈರಪ್ಪ ಸೂಡಿ, ಶರಣಪ್ಪ ಸತ್ಯಮ್ಮನವರ, ಎ.ಎಸ್. ಅಂಗಡಿ, ವಿ.ಎಸ್. ನವಲಗಿಂದ, ಎಸ್.ಎಂ. ತಳವಾರ ಮತ್ತು ಶಾಲಾ ಸಿಬ್ಬಂದಿಯವರು, ವಿದ್ಯಾರ್ಥಿಗಳು ಇದ್ದರು.

# ಅಪಘಾತ; ಗ್ರಾಮ ಸಹಾಯಕ ಸಾವು



■ವಿಜಯಸಾಕ್ಷಿ ಸುದ್ದಿ,ಲಕ್ಷ್ಮೇಶ್ವರ

ಟ್ರಾಕ್ಟರ್ ಹಾಗೂ ಬೈಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಬೈಕ್ ಸವಾರ ಹುಲ್ಲೂರಿನ ವಾಲಿಕಾರ (ಗ್ರಾಮಸಹಾಯಕ) ಮಹ್ಮದರಫೀಕ ಹುಸೇನಸಾಬ ನದಾಫ್ (26) ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಶುಕ್ರವಾರ ರಾತ್ರಿ ಲಕ್ಷ್ಮೇಶ್ವರ ತಾಲೂಕಿನ ಹುಲ್ಲೂರ-ಅಮರಾಪುರ ಮಾರ್ಗದ ರಸ್ತೆಯಲ್ಲಿ ಸಂಭವಿಸಿದೆ.

ಮೃತ ದುರ್ದೈವಿ ಮಹ್ಮದರಫೀಕ ನದಾಫ್ ಶುಕ್ರವಾರ ರಾತ್ರಿ 9ಕ್ಕೆ ಬೈಕ್ ಚಲಾಯಿಸಿಕೊಂಡು ಲಕ್ಷ್ಮೇಶ್ವರದಿಂದ ಹುಲ್ಲೂರಿಗೆ ಹೊರಟಿದ್ದರು. ಈ ವೇಳೆ ಎದುರಿನಿಂದ ವೇಗವಾಗಿ ಬಂದ ಟ್ರ್ಯಾಕ್ಟರ್ ಬೈಕ್ ಸವಾರನ ಮೇಲೆಯೇ ಹಾಯ್ದು ಪರಿಣಾಮ ಮಹ್ಮದರಫೀಕ ನದಾಫ್ ಸ್ಥಳದಲ್ಲಿಯೇ ಕೊನೆಯುಸಿರೆಳೆದಿದ್ದಾರೆ ಎಂದು ಶನಿವಾರ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಟ್ರ್ಯಾಕ್ಟರ್ ವಶಕ್ಕೆ ಪಡೆಯಲಾಗಿದ್ದು, ಚಾಲಕ ಪರಾರಿಯಾಗಿದ್ದಾನೆ.

ಮಗನ ಸಾವಿನ ಬಗ್ಗೆ ತಾಯಿ ಅನುಮಾನ ವ್ಯಕ್ತಪಡಿಸಿದ್ದರೆ, ಲಕ್ಷ್ಮೇಶ್ವರ ತಾಲೂಕು ಗ್ರಾಮ ಸಹಾಯಕರ ಸಂಘದವರೂ ಸಹ ಈ ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದಾರೆ. ಸೂಕ್ತ ತನಿಖೆಯಾಗಿ ತಪ್ಪಿತಸ್ಥರ ವಿರುದ್ಧ ಕ್ರಮವಾಗಬೇಕು ಮತ್ತು ಸಾವಿಗೆ ನ್ಯಾಯ ಹಾಗೂ ಕುಟುಂಬಕ್ಕೆ ಪರಿಹಾರ ಸಿಗಬೇಕೆಂದು ತಹಸೀಲ್ದಾರರಿಗೆ ಮನವಿ ಸಲ್ಲಿಸಿದ್ದಾರೆ.

### ಶ್ರಾವಣ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು


# ತುಳಿಯಲು ವೈರಿಗಳಿದ್ದರೆ ಬೆಳೆಸಲು ಭಗವಂತನಿದ್ದಾನೆ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಒಳ್ಳೆಯವರಿಗೆ ಇರುವಷ್ಟು ಶತ್ರುಗಳು ಕೆಟ್ಟವರಿಗೆ ಇರುವುದಿಲ್ಲ. ಕೆಟ್ಟವರಿಗೆ ಇರುವಷ್ಟು ಮಿತ್ರರು ಒಳ್ಳೆಯವರಿಗೆ ಇರುವುದಿಲ್ಲ. ತುಳಿಯಲು ವೈರಿಗಳಿದ್ದರೆ, ಬೆಳೆಸುವುದಕ್ಕೆ ಭಗವಂತ ಇದ್ದೇ ಇರುತ್ತಾನೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರಾವಣ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜೀವನದಲ್ಲಿ ಹಸಿದಾಗ ಅನ್ನ ಕೊಟ್ಟವರನ್ನು, ಸೋತಾಗ ನಮ್ಮ ಜೊತೆಗೆ ನಿಂತವರನ್ನು, ಕಷ್ಟದಲ್ಲಿದ್ದಾಗ ಸಹಾಯ ಮಾಡಿದವರನ್ನು ಎಂದಿಗೂ ಮರೆಯಬಾರದು. ಆಶೆಯನ್ನು ಬಿಟ್ಟು ಲೋಕವಿಲ್ಲ. ಆಸೆಯೆಂಬ ಸುಮಗಳ ಸುತ್ತ ಮನವೆಂಬ ಭ್ರಮರಗಳು ಸುತ್ತುತ್ತಲೇ ಇರುತ್ತವೆ. ಮೌನ ಮತ್ತು ಮುಗುಳ್ನಗೆ ಎರಡು ಶಕ್ತಿಶಾಲಿ ಸಾಧನಗಳು. ನಗುವು ಸಮಸ್ಯೆಗಳ ಪರಿಹಾರಕ್ಕೆ ದಾರಿ ತೋರಿದರೆ, ಮೌನ ಸಮಸ್ಯೆಗಳು ಸೃಷ್ಟಿಯಾಗದಂತೆ ನೋಡಿಕೊಳ್ಳುತ್ತದೆ. ಹಸಿದು ಬಂದ ಜೀವಕ್ಕೆ ಒಂದು ತುತ್ತು ಅನ್ನ ಕೊಟ್ಟರೆ ಅದೇ ದೇವರಿಗೆ ಪ್ರಸಾದ. ದುಡ್ಡು ಕೊಟ್ಟು ಎಲ್ಲಿ ಬೇಕಾದರೂ ಜಾಗ



ಖರೀದಿಸಬಹುದು. ಆದರೆ ಸ್ಮಶಾನದಲ್ಲಿ ಜೀವ ಕೊಟ್ಟೇ ಜಾಗ ತೆಗೆದುಕೊಳ್ಳಬೇಕಾಗುತ್ತದೆ ಎಂಬ ಕಟು ಸತ್ಯವನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಸ್ಪಷ್ಟವಾಗಿ ನಿರೂಪಿಸಿದ್ದಾರೆ. ಮೌಲ್ಯಾಧಾರಿತ ಜೀವನ ಸಂವರ್ಧನೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಚಿಂತನೆಗಳು ಸಕಲರ ಬಾಳಿನಲ್ಲಿ ಬೆಳಕು ತುಂಬಿವೆ ಎಂದರು. ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನದಲ್ಲಿ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜ್ಞಾನಕ್ಕಾಗಿ ಯಾರನ್ನಾದರೂ ಬೇಡು. ಆದರೆ ಅನ್ನಕ್ಕಾಗಿ ಯಾರನ್ನೂ ಬೇಡದಿರಿ. ಮುಖ ನೋಡಿ ಸ್ನೇಹ ಮಾಡುವ, ಬಟ್ಟೆ ನೋಡಿ ಗೌರವ ಕೊಡುವ, ಹಣ ನೋಡಿ ಜನರಿಂದ ಸಂಬಂಧ ಬೆಳೆಸುವವರಿಗಿಂತ ಸ್ವಲ್ಪ ದೂರದಲ್ಲಿರುವುದೇ ಒಳ್ಳೆಯದು. ದುಷ್ಟ ಶಕ್ತಿಗಳನ್ನು ದಮನ ಮಾಡಿ ಸಾತ್ವಿಕ ಶಕ್ತಿಗಳನ್ನು ಬೆಳೆಸಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ ಎಂದರು. ಹುಡುಗಿ ಹಿರೇಮಠದ ಸೋಮೇಶ್ವರ ಶಿವಾಚಾರ್ಯರು, ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯರು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು, ಗುರುಕುಲದ ಕುಲಪತಿ ಸಿದ್ಧಲಿಂಗಯ್ಯ ಹಿರೇಮಠ ಉಪಸ್ಥಿತರಿದ್ದರು. ಬೆಂಗಳೂರಿನ ಬೀರೂರು ಶಿವಸ್ವಾಮಿ, ನಂದೀಶ ದಾಸರಹಳ್ಳಿ, ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ, ಹರಪನಹಳ್ಳಿ ಎಂ. ಕೊಟ್ರೇಶಪ್ಪ, ಬ್ಯಾಡಗಿ ರವೀಂದ್ರ, ಮಂಜುನಾಥ ಶಾಸ್ತ್ರಿಗಳು ಭಾಗವಹಿಸಿದ್ದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ವಿಠಲಾಪುರ ಹಿರೇಮಠದ ಗಂಗಾಧರಸ್ವಾಮಿ ಇವರಿಂದ ಪ್ರಾರ್ಥನಾ ಗೀತೆ ಜರುಗಿತು. ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು.

ಬೆಳಿಗ್ಗೆ ಲೋಕಕಲ್ಯಾಣಾರ್ಥವಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಸಕಲ ಸದ್ಭಕ್ತರಿಗೆ ಶುಭ ಹಾರೈಸಿದರು. ಬೆಳಗಿನ ಪೂಜಾ ಸಂದರ್ಭದಲಿ ಭೂಗರ್ಭ ಸಂಜಾತ ಶ್ರೀ ಜಗದ್ಗುರು ರುದ್ರಮುನಿ ಶಿವಾಚಾರ್ಯರು ಬರೆದಿರುವ 'ಕಾಲ ಜ್ಞಾನ' ಭವಿಷ್ಯವಾಣಿಯ ಅಮೂಲ್ಯ ಕೃತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆಗೊಳಿಸಿದರು. ಶಿಗ್ಗಾಂವಿ ತಾಲೂಕಿನ ಕಬನೂರು ಗ್ರಾಮಸ್ಥರಿಂದ ಅನ್ನ ದಾಸೋಹ ಜರುಗಿತು.

# ಬ್ಯಾಂಕಿನ ಸೇವೆಗಳನ್ನು ಸದ್ಬಳಕೆ ಮಾಡಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬ್ಯಾಂಕಿನ ಉಳಿತಾಯ ಖಾತೆ ಸೇರಿದಂತೆ ಇತರೆ ಸೇವೆಗಳನ್ನು ಸಾರ್ವಜನಿಕರು ಸದ್ಬಳಕೆ ಮಾಡಿಕೊಂಡು ತಮ್ಮ ಜೀವನದ ಆರ್ಥಿಕ ಮುಗ್ಗಟ್ಟನ್ನು ನಿವಾರಿಸಿಕೊಳ್ಳಬೇಕೆಂದು ಸೆಂಟ್ರಲ್ ಬ್ಯಾಂಕ್ ಡಿಜಿಎಮ್ ರೀಜನಲ್ ಮುಖ್ಯಸ್ಥ ದೊಡ್ಡರಂಗಪ್ಪ ಹೇಳಿದರು.

ಸಮೀಪದ ಮಾರನಬಸರಿ ಗ್ರಾಮದಲ್ಲಿ ಸೆಂಟ್ರಲ್ ಬ್ಯಾಂಕ್ ಹಾಗೂ ಲೀಡ್ ಬ್ಯಾಂಕ್ ಸಹಯೋಗದಲ್ಲಿ ಗ್ರಾಹಕರ ಸಾಮಾಜಿಕ ಭದ್ರತೆಯ ಯೋಜನೆಗಾಗಿ ಹಮ್ಮಿಕೊಂಡಿದ್ದ ಮೂರು ತಿಂಗಳಿನ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು.

ಗ್ರಾಹಕರು ಈಗಿನಿಂದಲೇ ಹಣ ಉಳಿತಾಯ ಮಾಡುವದನ್ನು ಕಲಿತುಕೊಳ್ಳಬೇಕು. ದುಂದು ವೆಚ್ಚ ಮಾಡುವದರಿಂದ ನಿಮ್ಮ ಆರ್ಥಿಕ ಸ್ಥಿತಿ ಹಿನ್ನಡೆಯಾಗುತ್ತದೆ. ನೀವು ಸಂಪಾದನೆ ಮಾಡಿದ ಹಣದಲ್ಲಿ ಸ್ವಲ್ಪ ಹಣವನ್ನು ಬ್ಯಾಂಕಿನಲ್ಲಿ




ತೊಡಗಿಸುವದರಿಂದ ಮುಂದಿನ ನಿಮ್ಮ ಕಷ್ಟಗಳಿಗೆ ಸಹಾಯವಾಗುತ್ತದೆ. ನಮ್ಮಲ್ಲಿ ಅಪಘಾತ ವಿಮೆ ಸಹ ಇದ್ದು, ಯಾವುದಾದರೂ ತೊಂದರೆಯಾದಲ್ಲಿ ನಿಮ್ಮ ಕುಂಟುಬಕ್ಕೆ ನೆರವಾಗುತ್ತದೆ ಎಂದು ತಿಳಿಸಿದರು.

ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ ಮಾತನಾಡಿ, ಮೂರು ತಿಂಗಳ ಹಣಕಾಸು ಸೇರ್ಪಡೆ ಪೂರ್ಣತೆ ಅಭಿಯಾನದಲ್ಲಿ ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಕನಿಷ್ಠ ಒಂದು ಶಿಬಿರ ನಡೆಸಬೇಕಾಗಿದ್ದು ನಮ್ಮ ಮೇಲಾಧಿಕಾರಿಗಳ ಆದೇಶದ ಮೇರೆಗೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಅಟಲ್ ಪಿಂಚಣಿ ಯೋಜನೆಗೆ ಚಂದಾದಾರರಾಗಿ ತಿಂಗಳಿಗೆ 1000ದಿಂದ 5000 ಸಾವಿರ ರೂ.ವರೆಗೆ ಖಾತರಿಯ ಪಿಂಚಣಿ ಪಡೆಯುವ ಅವಕಾಶವಿದೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ, ಸರ್ವ ಸದಸ್ಯರು, ಪಿಡಿಓ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು. ನರೇಗಲ್ಲ ಸೆಂಟ್ರಲ್ ಬ್ಯಾಂಕ್ ಮ್ಯಾನೇಜರ ನರೇಂದ್ರ ಎಚ್ ಸ್ವಾಗತಿಸಿ ನಿರೂಪಿಸಿದರು.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಮಕ್ಕಳಿಗೆ ಬಾಲ್ಯದಿಂದಲೇ ಉತ್ತಮ ಸಂಸ್ಕಾರ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಸಂಸ್ಕೃತಿ ಭವ್ಯವಾಗಿದೆ. ಪ್ರತಿಯೊಬ್ಬರಿಗೂ ಸಂಸ್ಕೃತಿ ಮತ್ತು ಸಂಸ್ಕಾರ ಬಹಳ ಮುಖ್ಯ. ಮಕ್ಕಳಿಗೆ ಬಾಲ್ಯದಿಂದಲೇ ಒಳ್ಳೆಯ ಸಂಸ್ಕಾರ ನೀಡಬೇಕು. ಜಾತಿ ಮತ್ತು ಬೇಧವಿಲ್ಲದ ಸಂಸ್ಕೃತಿಯನ್ನು ಬಸವಾದಿ ಶಿವಶರಣರು ನೀಡಿದ್ದಾರೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2758ನೇ ಶಿವಾನುಭವ ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀಗಳು, ಸಂಸ್ಕೃತಿ ನಮ್ಮ ಆಚರಣೆಯಲ್ಲಿದೆ. ಹೆಣ್ಣುಮಕ್ಕಳಿಗೂ ಕೂಡ ಆಧ್ಯಾತ್ಮಿಕ ಸಂಸ್ಕೃತಿ ಕಲ್ಪಿಸಿದವರು ಶರಣರು. ಕಾಯಕ, ದಾಸೋಹ, ಸಮಾನತೆಯ ಮಹತ್ವವನ್ನು ವಿಶ್ವಕ್ಕೆ ಸಾರಿದರು. ವಚನ ಸಾಹಿತ್ಯ ಎಲ್ಲರಿಗೂ ಆವಶ್ಯ. ಶರಣ ಸಂಸ್ಕೃತಿಯ ಮೂಲ ಕನ್ನಡ ಭಾಷೆ ಎಂದು



ನುಡಿದರು.

ಶ್ರಾವಣ ಮಾಸದ ಅಂಗವಾಗಿ ಧಾರವಾಡದ ಸಂಗೀತ ಕಲಾವಿದೆ ಸುಜಾತಾ ಗುರವ ಅವರು ಅಕ್ಕ ಕೇಳವ್ವ ನಾನೊಂದು ಕನಸು ಕಂಡೆ ವಚನವನ್ನು ಹಾಡಿದರು. ಇದೇ ಸಂದರ್ಭದಲ್ಲಿ ಪ್ರತಿಷ್ಠಿತ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ ಹುಬ್ಬಳ್ಳಿ ಇವರಿಂದ ವಾಣಿಜ್ಯ ರತ್ನ ಪ್ರಶಸ್ತಿ ಪಡೆದ ಗದುಗಿನ ಗಣ್ಯ ಉದ್ದಿಮೆದಾರರಾದ ಶರಣ ಶರಣಬಸಪ್ಪ ಗುಡಿಮನಿ ಹಾಗೂ ಧರ್ಮಪತ್ನಿ ಸುಜಾತಾ ಇವರನ್ನು ಸನ್ಮಾನಿಸಲಾಯಿತು. ವಚನಸಂಗೀತ ಸೇವೆಯನ್ನು ಗುರುನಾಥ್ ಸುತಾರ ಹಾಗೂ ರೇವಣಸಿದ್ಧಯ್ಯ ಮರಿದೇವರಮಠ ನಡೆಸಿಕೊಟ್ಟರು. ಧರ್ಮಗ್ರಂಥಪಠಣವನ್ನು ನಿಶಾಂತ್ ವಿ.ಕಾಲವಾಡ ಹಾಗೂ ದೀಕ್ಷಾ ಎಂ.ಬುಳ್ಳಾ ನಡೆಸಿದರು. ದಾಸೋಹ ಸೇವೆಯನ್ನು ಮಾಜಿ ಸಹಕಾರ ಸಚಿವ ಎಸ್.ಎಸ್. ಪಾಟೀಲ ಮತ್ತು ಕುಟುಂಬ ವರ್ಗದವರು ಗದಗ ಮತ್ತು ಧಾರವಾಡ ಕೆ.ಸಿ.ಸಿ ಬ್ಯಾಂಕ್ ನಿರ್ದೇಶಕ ಸಿ.ಎಂ. ಪಾಟೀಲ ಹಾಗೂ ಶರಣೆ ಲಲಿತಾ ಕಾ. ಪಾಟೀಲ ಹಾಗೂ ಕುಟುಂಬ ವರ್ಗದವರು ವಹಿಸಿದ್ದರು.

ಉಪನ್ಯಾಸಕರಾಗಿ ಆಗಮಿಸಿದ ಧಾರವಾಡದ ಶಶಿ ಸಾಲಿ ಮಾತನಾಡಿ, ಭಾರತದ ಸಂಸ್ಕೃತಿ ಶರಣ ಸಂಸ್ಕೃತಿ. ಕಾಯಕ ಸಂಸ್ಕೃತಿ. ಸಮಸಮಾಜ ಕಟ್ಟುವ ಸಂಸ್ಕೃತಿಯಾಗಿದೆ. ಎಷ್ಟೆ ವಿದ್ಯಾವಂತರಾಗಿ ಉತ್ತಮ ನೌಕರಿಯಲ್ಲಿ ಇದ್ದರೂ, ವಿದೇಶದಲ್ಲಿದ್ದರೂ, ತಂದೆ-ತಾಯಿಗಳನ್ನು ವೃದ್ಧಾಶ್ರಮಗಳಿಗೆ ಕಳಿಸದೇ ಚೆನ್ನಾಗಿ ನೋಡಿಕೊಳ್ಳುವುದು ನಿಜವಾದ ಸಂಸ್ಕೃತಿ ಎಂದು ಅಭಿಪ್ರಾಯಪಟ್ಟರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ.ಉಮೇಶ ಪುರದ ಹಾಗೂ ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹ ಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷರಾದ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

### ಸುವರ್ಣ ಮಹೋತ್ಸವದ ಅಂಗವಾಗಿ ಆರೋಗ್ಯ ತಪಾಸಣಾ ಶಿಬಿರ

# ಆರೋಗ್ಯವೇ ನಿಜವಾದ ಸಂಪತ್ತು

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯನಿಗೆ ಹಣಕ್ಕಿಂತ ಆರೋಗ್ಯ ಬಹಳ ಮುಖ್ಯವಾಗಿದೆ. ಆರೋಗ್ಯವೇ ಭಾಗ್ಯವೆಂದು ಹಿರಿಯರು ತಮ್ಮ ಅನುಭವದ ಮೇಲೆ ಹೇಳಿದ್ದಾರೆ. ಕಾರಣ, ಎಲ್ಲರೂ ಆರೋಗ್ಯದ ಕಡೆಗೆ ಹೆಚ್ಚು ಗಮನ ಕೊಡಬೇಕೆಂದು ಐ.ಎಂ.ಎ ಸಂಘದ ಉಪಾಧ್ಯಕ್ಷ ಡಾ. ಜಿ.ಬಿ. ಬಿಡನಾಳ ತಿಳಿಸಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸುವರ್ಣ ಮಹೋತ್ಸವ ಸಂಭ್ರಮದ ನಿಮಿತ್ತ ಐ.ಎಂ.ಎ ಗದಗ, ಲಯನ್ಸ್ ಕ್ಲಬ್, ಸಿ.ಎಸ್.ಐ ಬ್ಲಡ್ ಬ್ಯಾಂಕ್, ಜಿಲ್ಲಾ ಔಷಧಿಗಳ ವ್ಯಾಪಾರಸ್ಥರ ಸಂಘದ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಆರೋಗ್ಯವೇ ನಿಜವಾದ ಸಂಪತ್ತು. ನೀವು ದುಡಿದು ಗಳಿಸಿದ ಹನವನ್ನು ಅನುಭವಿಸಲು ಆರೋಗ್ಯ ಬೇಕು.



ರಕ್ತದಾನ ಮಾಡಿ ಜೀವ ಉಳಿಸಿ ನಿಮ್ಮ ಆರೋಗ್ಯವನ್ನು ವೃದ್ಧಿಸಿಕೊಳ್ಳಿ ಎಂದು ತಿಳಿಸಿದರು.

ಉಚಿತ ಆರೋಗ್ಯ ತಪಾಸಣೆಯಲ್ಲಿ ಡಾ. ಜಗದೀಶ ಶಿರೋಳ, ಡಾ. ಶ್ರೀಧರ ಕುರಡಗಿ, ಡಾ. ತುಕಾತಾಮ ಸೂರಿ, ಡಾ. ನವೀನ ಹಿರೇಗೌಡ್ರ, ಡಾ. ಶಿಲ್ಪಾ ಕುಷ್ಟಗಿ, ಡಾ. ರೇಷ್ಮಾ ಪಾಟೀಲ, ಡಾ. ವೀರೇಶ, ಡಾ. ಹೊಸಮನಿ, ಡಾ. ಭೀಮಸಿಂಗ್ ಮುಂತಾದವರು ಭಾಗವಹಿಸಿ ಆರೋಗ್ಯ ತಪಾಸಣೆ ಮಾಡಿ, ಸಲಹೆ-ಸೂಚನೆ ನೀಡಿ, ಉಚಿತ ಔಷಧಿ ವಿತರಿಸಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಸ್ವಾಗತಿಸಿದರು. ಮಾಜಿ ಅಧ್ಯಕ್ಷ ಚಂದ್ರು ಬಾಳಿಹಳ್ಳಿಮಠ ಕಾರ್ಯಕ್ರಮ ನಿರೂಪಿಸಿದರು. ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವರ್ಣೇಕರು ವಂದಿಸಿದರು ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಡಿಗಾಗಿ ಹೋರಾಡಿದ ರಾಯಣ್ಣ ಸದಾ ಸ್ಮರಣೀಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗದ ವತಿಯಿಂದ ಸಂಗೊಳ್ಳಿ ರಾಯಣ್ಣ ಜಯಂತಿ ಅಂಗವಾಗಿ ಶನಿವಾರ ರಾಯಣ್ಣ, ಕಿತ್ತೂರ ಚನ್ನಮ್ಮ ಮತ್ತು ರಾಮನ ಮೂರ್ತಿಯ ಭವ್ಯ ಮೆರವಣಿಗೆ ನೆರವೇರಿತು.

ಮೆರವಣಿಗೆಗೆ ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ, ಕುರುಬರ ಸಮಾಜದ ಅಧ್ಯಕ್ಷ ಶೇಖಪ್ಪ ಕಾಳೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಬ್ರಿಟಿಷರ ದಬ್ಬಾಳಿಕೆಯ ವಿರುದ್ಧ ಜನರನ್ನು ಜಾಗೃತಗೊಳಿಸಿ ನಾಡಿಗಾಗಿ ಹೋರಾಡಿದ ಕೀರ್ತಿ ರಾಯಣ್ಣನವರಿಗೆ ಸಲ್ಲುತ್ತದೆ. ಕಿತ್ತೂರು ರಾಣಿ ಚನ್ನಮ್ಮಳ ಭಂಟನಾಗಿ, ಸದಾ ದೇಶಭಕ್ತನಾಗಿ ನಾಡಿನ ಜನರನ್ನು ಸಂಘಟನೆಯೊಂದಿಗೆ ಬ್ರಿಟಿಷರಲ್ಲಿ ನಡುಕ ಹುಟ್ಟಿಸಿದ ಶೂರನಾಗಿದ್ದ. ಕಿತ್ತೂರರಾಣಿ ಚನ್ನಮ್ಮಳ ಹೋರಾಟಕ್ಕೆ ಬೆಂಬಲವಾಗಿ ನಿಂತು ಮೋಸದಿಂದ ವೀರಮರಣವನ್ನು ಹೊಂದಿದ ರಾಯಣ್ಣ ಯುವಕರ ಮನಸ್ಸಿನಲ್ಲಿ ಸದಾ ಉಳಿಯುವಂತಾಗಿದ್ದಾನೆ ಎಂದರು. ಈ ವೇಳೆ ವಿಜಯಕುಮಾರ ಹತ್ತಿಕಾಳ, ತಿಪ್ಪಣ್ಣ ಸಂಶಿ, ಹೊನ್ನಪ್ಪ ವಡ್ಡರ, ಈರಣ್ಣ ಪೂಜಾರ, ಸುರೇಶ ಹಟ್ಟಿ, ಲೆಂಕೆಪ್ಪ ಶರಸೂರಿ, ಮೌಲಾಲಿ ಎನ್, ಮಂಜು ಮುಳಗುಂದ, ಬಸವರಾಜ ಹಿರೇಮನಿ, ಭರಮಣ್ಣ ಶರಸೂರಿ, ಸಿದ್ದು ದುರಗಣ್ಣವರ, ಮೈಲಾರಿ ಹೆಗ್ಗಣ್ಣವರ, ಮಾಂತೇಶ ಗುದ್ಯಾಳ, ಮುತ್ತು ಕರ್ಜೆಕಣ್ಣವರ, ಮಲ್ಲಿಕಾರ್ಜುನ ನೀರಾಲೋಟಿ, ವೆಂಕಪ್ಪ ಬಸಾಪುರ, ಸುರೇಶ ಸೂರಣಗಿ, ಶಿವು ಹೊಂಬಳ ಸೇರಿ ಅಭಿಮಾನಿಗಳು ಇದ್ದರು.

# ಪ್ರತ್ಯಕ್ಷ ದತ್ತಾಂಶ ಕ್ರೋಢೀಕರಣವಾಗಿಲ್ಲ

▶▶ಮೊದಲನೇ ಪುಟದಿಂದ

ಕಾಂತರಾಜ್ ಆಯೋಗದ ವರದಿ 10 ವರ್ಷ ಗತಿಸಿದರೂ ಸರಕಾರಕ್ಕೆ ಸಲ್ಲಿಸಲಿಲ್ಲ. ನಂತರ ಬಂದ ಕೆ.ಜಯಪ್ರಕಾಶ ಹೆಗಡೆ 2024ರಲ್ಲಿ ಸಂಗ್ರಹಿಸಿದ ವರದಿಯನ್ನು ಅಂತಿಮವಾಗಿ ಮುಖ್ಯಮಂತ್ರಿಗಳಿಗೆ ಸಲ್ಲಿಸಿತು. ಈ ವರದಿ ಹಲವಾರು ಕಾರಣಗಳಿಂದ ಅಸಮಾಧಾನ ಹುಟ್ಟುಹಾಕಿತು ಎಂದರು.

ಸಮಾಜದ ಮುಖಂಡ ವಸಂತಸಾ ಲದ್ವಾ ಮಾತನಾಡಿ, ರಾಜ್ಯದ ಪಟ್ಟೆಗಾರ, ಪಟೇಗಾರ, ಸೋಮವಂಶ ಕ್ಷತ್ರಿಯ, ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ, ಸಾವಜಿ ಸಮಾಜಕ್ಕೆ ಈ ವರದಿಯಿಂದ ಅನ್ಯಾಯವಾಗಿದೆ. ನಂತರ ಬಂದ ಕೆ. ಜಯಪ್ರಕಾಶ ಹೆಗಡೆಯವರು ಸಲ್ಲಿಸಿದ್ದು ಜಾತಿ ಗಣತಿಯೋ, ಸಮೀಕ್ಷೆಯೋ ಅಥವಾ ಮಾದರಿ ಸಮೀಕ್ಷೆಯೋ ಎಂಬುದನ್ನು ಸ್ಪಷ್ಟಪಡಿಸಬೇಕು. ಜಾತಿ ಗಣತಿ ಜನಸಂಖ್ಯೆಯು, ಪ್ರತಿಯೊಬ್ಬ ಸದಸ್ಯನಿಂದ ಮನೆ ಮನೆಗೆ ಭೇಟಿ ನೀಡಿ ದತ್ತಾಂಶ ಬಿಂದುಗಳನ್ನು ಒಳಗೊಂಡಿರುವುದರಿಂದ ನಿಖರ ಮತ್ತು ವಿಶ್ವಾಸಾರ್ಹವಾಗಿರುತ್ತದೆ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಅಂಬಸಾ ಖಟವಟೆ, ರಾಜು ಬದಿ, ರವಿ ಸಿದ್ಲಿಂಗ, ಬಲರಾಮ್ ಬಸವಾ, ವಿನೋದ ಬಾಂಡಗೆ, ಅಂಬಸಾ ಖಟವಟೆ, ಅನಿಲ ಖಟವಟೆ ಇದ್ದರು.

# 'ಅಂತರ್ಯಾಮಿ' ಚಿತ್ರದ ಹಾಡು ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಗುರುರೇಣುಕಾ ಪ್ರೊಡಕ್ಷನ್ ತುಮಕೂರು ಅವರ 'ಅಂತರ್ಯಾಮಿ' ಕನ್ನಡ ಚಲನಚಿತ್ರದ 'ಹಕ್ಕಿ ನಾನು ಹಗಲಿನಲ್ಲಿ' ಹಾಡನ್ನು ಚಲನಚಿತ್ರ ನಿರ್ದೇಶಕ, ನಿರ್ಮಾಪಕ, ಚಿತ್ರಕಥೆಗಾರ, ಗೀತರಚನೆಕಾರ ಸಿಂಪಲ್‌ಸುನಿ ಬಿಡುಗಡೆ ಮಾಡಿ ಶುಭ ಕೋರಿದರು.

ಚಿತ್ರದ ಶೀರ್ಷಿಕೆಯನ್ನು ಸಿದ್ಧಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿಯವರು ಅನಾವರಣಗೊಳಿಸಿದ್ದರು. ಚಿತ್ರದ ಫಸ್ಟ್‌ಲುಕ್‌ನ್ನು ಗೃಹಮಂತ್ರಿ ಜಿ




ಪರಮೇಶ್ವರ್ ಅನಾವರಣಗೊಳಿಸಿದ್ದರು ಎಂದು ನಿರ್ಮಾಪಕ ನವೀನ್ ಎನ್.ಜಿ ತಿಳಿಸಿದರು. ಈ ಸಂದರ್ಭದಲ್ಲಿ ನಿರ್ದೇಶಕ ಧನಂಜಯ್, ನಾಯಕ ಪ್ರಣವ್, ನಾಯಕಿ ಮೊಹಿರಾಚಾರ್ಯ ಸಾಹಿತಿ ವಿನಯ್, ಕಾವ್ಯ, ಕಾಂತಿ ಮತ್ತು ಅರವಿಂದ ಸೇರಿದಂತೆ ಚಿತ್ರತಂಡದವರು ಉಪಸ್ಥಿತರಿದ್ದರು.

ಶೀಘ್ರದಲ್ಲೇ ಬಿಡುಗಡೆ ಆಗಲಿರುವ ಈ ಚಿತ್ರದಲ್ಲಿ ನಾಯಕರಾಗಿ ಪ್ರಣವ್, ನಾಯಕಿಯಾಗಿ ಮೋಹಿರ ಆಚಾರ್ಯ, ಮಂಡ್ಯ ಸಿದ್ದು, ಕಾಮಿಡಿ ಕಿಲಾಡಿ ಉದಯ್, ಕಿಟ್ಟಿ, ಮಂಜಿವಾ, ಮುಗಿಲನ್, ಬೇಬಿ ಹಾನ್ಸಿ, ಬಾಲಕೃಷ್ಣ ಬರಗೂರು, ಹೇಮಾ ಮಾಲಿನಿ, ರೇಣುಕಾಂಬ, ರುದ್ರಮುನಿ, ಯೋಗೇಶ ಮೊದಲಾದವರಿದ್ದಾರೆ. ಛಾಯಾಗ್ರಹಣ ಎಸ್.ಬಾಲು, ವಿನಯ್ ಕಾವ್ಯ ಕಾಂತಿಯವರ ಸಾಹಿತ್ಯ, ಪೃಥ್ವಿ ಭಟ್, ಮೇಘನಾ ಕುಲಕರ್ಣಿ, ದೇಸಿ ಮೋಹನ್ ರವರು ಹಾಡುಗಳಿಗೆ ಧ್ವನಿ ನೀಡಿದ್ದಾರೆ.

ಸಂಗೀತ ದೇಸಿ ಮೋಹನ್, ಸಂಕಲನ ಅರವಿಂದ್ ರಾಜ್, ನೃತ್ಯ ನಿರ್ದೇಶನ ಬಾಲು ಮಾಸ್ಟರ್, ತಾಂತ್ರಿಕ ಸಲಹೆ ಶ್ರೀಕಾಂತ್ ಶ್ರಾಫ್, ಡಿಆಯ್ ಚೆನ್ನೈ, ಬೆಂಗಳೂರ, ಪಿ.ಆರ್.ಓ ಎಂಜೆಎಸ್‌ಪಿಆರ್, ಪತ್ರಿಕಾ ಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಅವರದಿದೆ. ನಿರ್ದೇಶನ ತಂಡದಲ್ಲಿ ರವಿ ಶಂಕರ್‌ನಾಗ್, ಶರತ್ ಘಾಟಿ, ಮಂಜುನಾಥ್ ಹೊಸರಂಗಾಪುರ, ಮುಕುಂದ, ರಾಣಾ, ವಸಂತ್ ಇದ್ದಾರೆ. ನವೀನ್ ಎನ್.ಜಿ ನಿರ್ಮಾಪಕರಾಗಿರುವ ಈ ಚಿತ್ರವನ್ನು ಕೆ. ಧನಂಜಯ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ.

ಗಣೇಶೋತ್ಸವ, ಈದ್‌ಮಿಲಾದ್ ಪ್ರಯುಕ್ತ ಕರೆಯಲಾಗಿದ್ದ ಶಾಂತಿ ಸಭೆಯಲ್ಲಿ ಎಸ್‌ಪಿ ರೋಹನ್ ಜಗದೀಶ ಪಾಠ

# ಡಿಜೆ ನಮ್ಮ ಸಂಸ್ಕೃತಿ–ಸಂಪ್ರದಾಯವಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಬ್ಬಗಳ ಆಚರಣೆ ದಾರಿತಪ್ಪದಂತೆ, ಸಂಪ್ರದಾಯದಂತೆ, ಅರ್ಥಪೂರ್ಣವಾಗಿ ಆಚರಿಸಬೇಕು. ಹಬ್ಬಗಳ ಆಚರಣೆ ನೆಪದಲ್ಲಿ ಶಾಂತಿ, ಸುವ್ಯವಸ್ಥೆ, ಕೋಮು ಭಾವನೆ ಕೆರಳಿಸುವ ಮೂಲಕ ಸಮಾಜದ ಸ್ವಾಸ್ಥ್ಯ ಹಾಳು ಮಾಡುವವರ ಮೇಲೆ ಪೊಲೀಸ್ ಇಲಾಖೆಯಿಂದ ಹದ್ದಿನ ಕಣ್ಣಿಟ್ಟು ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಹೇಳಿದರು.

ಅವರು ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಭಾನುವಾರ ಗಣೇಶೋತ್ಸವ ಹಾಗೂ ಈದ್‌ಮಿಲಾದ್ ಹಬ್ಬದ ಪ್ರಯುಕ್ತ ಕರೆಯಲಾಗಿದ್ದ ಶಾಂತಿ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಹಬ್ಬದ ಆಚರಣೆ ವೇಳೆ ಇಸ್ಪೀಟ್ ಆಡುವುದು, ಅಕ್ರಮ ಮದ್ಯ ಮಾರಾಟ, ಪಿಓಪಿ ಗಣೇಶ ನಿಷೇಧ, ರಾತ್ರಿಯಿಡೀ ಜನರಿಗೆ ತೊಂದರೆಯಾಗುವಂತೆ ವರ್ತಿಸುವುದರ ಮೇಲೆ ಸಂಪೂರ್ಣ ನಿಗಾ ಇಡಲಾಗುವುದು. ಹಬ್ಬ ಶಾಂತಿಯುತವಾಗಿ ನಡೆಯುವಲ್ಲಿ ಗಣೇಶ ಮಂಡಳಿ, ಈ ಪ್ರದೇಶದ ಹಿರಿಯರು, ಜನಪ್ರತಿನಿಧಿಗಳ ಜವಾಬ್ದಾರಿ ಮುಖ್ಯವಾಗಿದೆ. ಮಂಡಳಿಯವರು ಸಿಸಿ ಕ್ಯಾಮರಾ ಅಳವಡಿಸಿಕೊಳ್ಳಿ. ಪೊಲೀಸ್ ಇಲಾಖೆಯಿಂದಲೂ ಸೂಕ್ಷ್ಮ/ಅತಿ ಸೂಕ್ಷ್ಮ ಸ್ಥಳಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಲಾಗುವುದು. ಹಬ್ಬದ ಆಚರಣೆ ಮುಗಿಯುವವರೆಗೂ ಡ್ರೋನ್ ಕ್ಯಾಮರಾಗಳು ಕಾರ್ಯ ನಿರ್ವಹಿಸುತ್ತವೆ. ಪ್ರತಿಯೊಬ್ಬರ ಚಲನ-ವಲನ, ಚಹರೆ ಚಿತ್ರೀಕರಣವಾಗುತ್ತದೆ. ಅಹಿತಕರ ಘಟನೆಗೆ ಕಾರಣರಾದರೆ ಪೊಲೀಸ್ ಕೇಸ್‌ನಿಂದ ಮುಕ್ತರಾಗಲು ಜೀವನದುದ್ದಕ್ಕೂ ಕೋರ್ಟ್‌ಗೆ ಅಲೆಯಬೇಕಾಗುತ್ತದೆ ಎಂದು ಸೂಚ್ಯವಾಗಿ ತಿಳಿಸಿದರು.

ಡಿಜೆ ಬಳಕೆಯನ್ನು ಸುಪ್ರೀಂ ಕೋರ್ಟ್ ನಿಷೇಧಿಸಿದ್ದು, ಕೋರ್ಟ್ ಆದೇಶಕ್ಕೆ ಎಲ್ಲರೂ ಬದ್ಧರಾಗಬೇಕು. ಭೂಮಿಯನ್ನೇ ನಡುಗಿಸುವ ಡಿಜೆ ಅಬ್ಬರದ ಸೌಂಡ್ ಬಳಕೆ ನಿಮ್ಮನ್ನು ಸೇರಿ ಹಸುಗೂಸುಗಳು, ಗರ್ಭಿಣಿಯರು, ಪುಟಾಣಿ ಮಕ್ಕಳು, ಹಿರಿಯರು, ಆರೋಗ್ಯ ಸಮಸ್ಯೆ ಇರುವವರು ಸೇರಿ ಎಲ್ಲರಿಗೂ ಸಮಸ್ಯೆಯಾಗುತ್ತದೆ. ಮೆರವಣಿಗೆಗೆ ಲಕ್ಷಾಂತರ ರೂ ಖರ್ಚು ಮಾಡಿದರೂ ಎಲ್ಲರೂ ನಿಮಗೆ ಹಿಡಿಶಾಪ ಹಾಕುತ್ತಾರೆ. ಡಿಜೆ ನಮ್ಮ ಸಂಸ್ಕೃತಿ-ಸಂಪ್ರದಾಯವಲ್ಲ. ಇದರಿಂದ ಯಾವ ಸಾಧನೆಯೂ ಆಗದು. ಬದಲಾಗಿ ಸಾಂಪ್ರದಾಯಿಕವಾಗಿ ಎಲ್ಲರೂ ಒಗ್ಗಟ್ಟಿನಿಂದ ಹಾಡಿ. ಕುಣಿದು ಶಾಂತಿ, ನೆಮ್ಮದಿ, ಪರಸ್ಪರ



ಸ್ನೇಹ ಸೌಹಾರ್ದತೆಯಿಂದ ಗಣೇಶ ವಿಸರ್ಜನೆ ಮಾಡಬೇಕು. ಹಬ್ಬದ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ರೂಪಿಸಿರುವ ನಿಯಮಗಳನ್ನು ಪಾಲಿಸುವದು ಅಗತ್ಯವಾಗಿದ್ದು, ಎಲ್ಲರೂ ಸಹಕಾರದಿಂದ ಹಬ್ಬ ಆಚರಣೆ ಮಾಡೋಣ ಎಂದರು.

ಡಿವೈಎಸ್‌ಪಿ ಮೂರ್ತುಜಾ ಖಾದ್ರಿ, ಸಿಪಿಐ ನಾಗರಾಜ ಮಾಡಳ್ಳಿ ಮಾತನಾಡಿ, ಹಬ್ಬವನ್ನು ಶಾಂತಿ, ಸಹೋದರ ಭಾವನೆಯೊಂದಿಗೆ ಆಚರಿಸಿ. ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆಯಿಂದ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ. ಸಾರ್ವಜನಿಕರು ಸಹಕರಿಸಬೇಕು ಎಂದರು.

ಪಿ.ಬಿ. ಖರಾಟೆ, ಚಂಬಣ್ಣ ಬಾಳಿಕಾಯಿ, ಸೋಮೇಶ ಉಪನಾಳ, ಜಯಕ್ಕ ಕಳ್ಳಿ, ಕರೀಂಖಾನ ಕರಿಂಖಾನವರ, ಎಸ್.ಕೆ. ಹವಾಲ್ದಾರ, ತಿಪ್ಪಣ್ಣ ಸಂಶಿ, ಮಂಜುನಾಥ ಮಾಗಡಿ, ಗಂಗಾಧರ ಮೆಣಸಿನಕಾಯಿ, ಬಸವರಾಜ ಹೊಗೆಸೊಪ್ಪಿನ, ಫಕ್ಕಿರೇಶ ಅಣ್ಣಿಗೇರಿ, ಇಸ್ಮಾಯಿಲ್ ಆಡೂರ, ಶರಣು ಗೋಡಿ, ಈರಣ್ಣ ಪೂಜಾರ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಗ್ರೇಡ್ 2 ತಹಸೀಲ್ದಾರ ಮಂಜುನಾಥ ಅಮಾಸಿ, ಡಿ.ಆರ್. ಡಿಎಸ್ಪಿ ವಿದ್ಯಾನಂದ ನಾಯಕ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ನೀಲಪ್ಪ ಕರ್ಜೆಕ್ಕಣ್ಣವರ, ಮಹೇಶ ಕಲಘಟಗಿ, ಥಾವರಪ್ಪ ಲಮಾಣಿ, ದಾದಾಪೀರ ಮುಚ್ಚಾಲೆ, ಸದಾನಂದ ನಂದೆಣ್ಣವರ, ಪ್ರಕಾಶ ಮಾದನೂರ, ಜಗದೀಶಗೌಡ ಪಾಟೀಲ, ಹೊನ್ನಪ್ಪ ವಡ್ಡರ, ಜಾಕೀರ ಹವಾಲ್ದಾರ, ನೀಲಪ್ಪ ಶರಸೂರಿ, ಫಕ್ಕಿರೇಶ ಭಜಕ್ಕನವರ, ವಿಜಯ ಕುಂಬಾರ, ಶಿವಪ್ಪ ಡಂಬಳ, ಹೆಸ್ಕಾಂ, ಅಗ್ನಿಶಾಮಕ, ಹಿರಿಯರು, ವಿವಿಧ ಸಂಘಟನೆಗಳ ಮುಖಂಡರು ಪಾಲ್ಗೊಂಡಿದ್ದರು. ಪಿಎಸ್‌ಐ ನಾಗರಾಜ ಗಡಾದ ಸ್ವಾಗತಿಸಿ ವಂದಿಸಿದರು. ಹವಾಲ್ದಾರ್ ಪ್ರಕಾಶ ಮ್ಯಾಗೇರಿ, ಶಿಕ್ಷಕ ಈಶ್ವರ ಮೆಡ್ಲೇರಿ ನಿರೂಪಿಸಿದರು.

ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಸಾಕ್ಷಿಯಾದ ಪಟ್ಟಣದಲ್ಲಿನ ಗಣೇಶ ಹಬ್ಬದ ಆಚರಣೆ ಮಾದರಿಯಾಗಲಿ. ಎಲ್ಲರೂ ಸೇರಿ ಒಂದೇ ದಿನ ಸಾರ್ವಜನಿಕ ಗಣಪತಿ ವಿಸರ್ಜನೆಯನ್ನು ವಿಜೃಂಭಣೆಯಿಂದ ಆಚರಿಸಿದರೆ ಪೊಲೀಸರಿಗೂ ಸೂಕ್ತ ಬಂದೋಬಸ್ತ್ ನೀಡಲು ಸಾಧ್ಯವಾಗುತ್ತದೆ. ಬೀಟ್ ಪೊಲೀಸ್ ಸರಿಯಾಗಿ ಕಾರ್ಯನಿರ್ವಹಿಸಿ ಗಣಪತಿ ಮಂಡಳಿಯವರು ಸ್ವಯಂ ಸೇವಕರನ್ನು ನೇಮಿಸಿಕೊಳ್ಳಿ. ಪುರಸಭೆಯವರು ಪಟಾಕಿ ಅಂಗಡಿಗಳನ್ನು ಮೈದಾನಕ್ಕೆ ಸ್ಥಳಾಂತರಿಸಿ, ರಸ್ತೆ ದುರಸ್ತಿ ಕಾರ್ಯ ಮಾಡಿಸಿ. ಪ್ರತಿಷ್ಠಾಪನೆಗೆ ಸಂಬಂಧಪಟ್ಟ ಪುರಸಭೆ, ಹೆಸ್ಕಾಂ, ಅಗ್ನಿ ಶಾಮಕ ಇಲಾಖೆಯಿಂದ ಪರವಾನಗಿ ತೆಗೆದುಕೊಳ್ಳಲು ಏಕ ಗವಾಕ್ಷಿ ವ್ಯವಸ್ಥೆ ಮಾಡಲಾಗಿದೆ ಎಂದು ಎಸ್‌ಪಿ ರೋಹನ್ ಜಗದೀಶ್ ತಿಳಿಸಿದರು.

# ಕಂಚಿನ ಪದಕ ಗೆದ್ದ ರಮೇಶ್‌ಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಡಂಬಳ

ಏಷ್ಯನ್ ಸರ್ಫಿಂಗ್ ಚಾಂಪಿಯನ್‌ಷಿಪ್‌ನಲ್ಲಿ ಮುರುಡಿ ತಾಂಡಾ ಗ್ರಾಮದಿಂದ ರಮೇಶ ಬೂದಿಹಾಳ ಪುರುಷರ ವಿಭಾಗದಲ್ಲಿ ಕಂಚಿನ ಪದಕ ಗೆದ್ದು, ಏಷ್ಯನ್ ಸರ್ಫಿಂಗ್ ಚಾಂಪಿಯನ್‌ಷಿಪ್‌ನಲ್ಲಿ ಪದಕ ಗೆದ್ದ ಭಾರತದ ಮೊದಲ ಸರ್ಫರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವುದು ಪ್ರಶಂಸನೀಯ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ರೋಣ ಮತಕ್ಷೇತ್ರ ವ್ಯಾಪ್ತಿಯ ಡಂಬಳ ಹೋಬಳಿಯ ಮುರುಡಿ ತಾಂಡಾದ ನಿವಾಸಿ ರಮೇಶ ಬೂದಿಹಾಳ ಚೆನ್ನೈನಲ್ಲಿ ನಡೆದ ಏಷ್ಯನ್ ಸರ್ಫಿಂಗ್ ಚಾಂಪಿಯನ್‌ಷಿಪ್‌ನಲ್ಲಿ ಕಂಚಿನ ಪದಕ ಗೆದ್ದ ಹಿನ್ನೆಲೆಯಲ್ಲಿ ವ್ಹಿ.ಆರ್. ಗುಡಿಸಾಗರರ ನಿವಾಸದಲ್ಲಿ ಸನ್ಮಾನಿಸಿ ಮಾತನಾಡಿ, ಎಸ್.ಆರ್. ಪಾಟೀಲ ಪ್ರತಿಷ್ಠಾನದಿಂದ 1 ಲಕ್ಷ ರೂ ಪ್ರೋತ್ಸಾಹಧನ ನೀಡುವುದಾಗಿ ಹೇಳಿದರು.



ವಿದ್ಯಾಭ್ಯಾಸದೊಂದಿಗೆ ಕ್ರೀಡಾ ಚಟುವಟಿಕೆಯಲ್ಲಿ ಯುವಕರು ತಮ್ಮನ್ನು ತೊಡಗಿಸಿಕೊಂಡಾಗ ಉತ್ತಮ ಆರೋಗ್ಯದ ಜೊತೆಗೆ ಉತ್ತಮ ಸಾಧನೆ ಮಾಡಬಹುದು ಎನ್ನುವುದನ್ನು ರಮೇಶ ಬೂದಿಹಾಳ ತೋರಿಸಿಕೊಟ್ಟಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಆದರಳ್ಳಿ ಗವಿಮಠದ ಡಾ. ಕುಮಾರ ಮಹಾರಾಜರು, ವಕೀಲರಾದ ವ್ಹಿ.ಆರ್. ಗುಡಿಸಾಗರ ಮಾತನಾಡಿ, ರಮೇಶ ಬೂದಿಹಾಳರ ಸಾಧನೆ ನಮ್ಮ ರಾಜ್ಯದ ಮತ್ತು ಗದಗ ಜಿಲ್ಲೆಯ ಜನತೆಗೆ ಹೆಮ್ಮೆಯ ವಿಷಯವಾಗಿದೆ. ಇವರಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಇನ್ನಷ್ಟು ಪ್ರೋತ್ಸಾಹ ಸಿಗುವಂತಾಗಲಿ. ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರು ಎಸ್.ಆರ್. ಪಾಟೀಲ ಪ್ರತಿಷ್ಠಾನದಿಂದ 1 ಲಕ್ಷ ರೂ ಪ್ರೋತ್ಸಾಹಧನ ನೀಡುತ್ತಿರುವುದು ಪ್ರಶಂಸನೀಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಯುಸೂಫ್ ಈಟಗಿ, ಹಾಲೇಶ ಹಳ್ಳಿ, ವಸಂತ ಮಾಳಗಿಮನಿ, ಬಸುರಾಜ ಜಗ್ಗಲ್, ಬಸುರಾಜ ನವಲಗುಂದ, ಪಿ.ಬಿ. ಅಳಗವಾಡಿ, ಯಚ್ಚರಗೌಡ ಗೋವಿಂದಗೌಡರ, ಶೇಖರ ಪವಾರ, ಮನೋಜ ರಾಠೋಡ ಸೇರಿದಂತೆ ಮುರುಡಿ ತಾಂಡಾ ಗ್ರಾಮಸ್ಥರು ಇದ್ದರು.

# ಗೋಕುಲಾಷ್ಟಮಿ ನಿಮಿತ್ತ ತೊಟ್ಟಿಲೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಭಾವಸಾರ ಕ್ಷತ್ರಿಯ ಸಮಾಜದ ಶ್ರೀ ಪಾಂಡುರಂಗ ದೇವಸ್ಥಾನದಲ್ಲಿ ಗೋಕುಲಾಷ್ಟಮಿ ನಿಮಿತ್ತ ತೊಟ್ಟಿಲ ಕಾರ್ಯಕ್ರಮ ಜರುಗಿತು. ಶ್ರೀ ಹಿಂಗುಲಾಂಬಿಕಾ ಮಹಿಳಾ ಮಂಡಳಿಯ ಮಹಿಳೆಯರು, ಬಾಲಕಿಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಶುಕ್ರವಾರ ರಾತ್ರಿ 8 ಗಂಟೆಗೆ ಆರಂಭವಾದ ಚಿಕ್ಕ ಮಕ್ಕಳ ವೇಷಭೂಷಣ, ಕೃಷ್ಣಲೀಲೆಯ ವಿವಿಧ ರೂಪಕಗಳು, ನೃತ್ಯ, ಗೀತೆಗಳನ್ನು ಹಾಡಿ ಸಂಭ್ರಮಿಸಿದರು. ಕೃಷ್ಣ ವೇಷದಲ್ಲಿ ಸಂತೋಷ ಬೋಮಲೆ ಪಾತ್ರ ಆಕರ್ಷಣೆಯಾಗಿತ್ತು. ವಾರಕರಿಯವರು ಸಮಾಜ ಬಾಂಧವರು ಸಾಂಪ್ರದಾಯಿಕ ಅಷ್ಟಮಿಯ ಅಭಂಗ ಭಜನೆ, ಮಂಗಳಾರತಿಯ ನಂತರ ಕೃಷ್ಣನನ್ನು ತೊಟ್ಟಿಲಲ್ಲಿ ಹಾಕಿ ಜೋಗುಳ ಹಾಡಿ ಸಂಭ್ರಮಿಸಿದರು. ಸಮಾಜದ ಶ್ರೇಷ್ಠ ನವಲೆ, ರಶ್ಮಿ ಮಹೇಂದ್ರಕರ, ಸಹನಾ ಟಿಕಾರೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಸಂಘಟಿಸಿ ಗಮನ ಸೆಳೆದರು. ಈ ಸಂದರ್ಭದಲ್ಲಿ ಲಕ್ಷ್ಮೀಬಾಯಿ ಮಾತಾಡೆ, ಕಲಾವತಿ ಜಾಧವ್, ಸರೋಜಾಬಾಯಿ ನವಲೆ, ಲತಾ ಅಚಲಕರ, ನಂದಾ ನವಲೆ, ಮೀರಾ, ಲತಾ ಮಹೇಂದ್ರಕರ, ತ್ರಿವೇಣಿ, ರಾಣಿ, ನವಲೆ, ಪೂರ್ಣಿಮಾ, ಕವಿತಾ, ಜ್ಯೋತಿ, ಅಕ್ಷತಾ ಬೋಮಲೆ, ಲಕ್ಷ್ಮೀ ಬೇಂದ್ರೆ, ಧನು ಮಾತಾಡೆ, ಸಂತೋಷಿ ತಿರುಮಲೆ, ರಾಜೇಶ್ವರಿ, ವಿದ್ಯಾ, ಗಾಯತ್ರಿ, ಮಧು ಮಾಂಡ್ರೆ, ಪಲ್ಲವಿ ಸರ್ವದೆ, ಕಾಂಚನಾ ಹಾವಳೆ, ಹಭಪ ಪುಂಡಲೀಕ ಮಾತಾಡೆ, ಸತೀಶ ಮಾಂಡ್ರೆ, ಸಮಿತಿಯ ಮುಖಂಡರಾದ ಕಿರಣ ನವಲೆ, ಸಂತೋಷ ಸರ್ವದೆ, ಪ್ರಭು ಬೋಮಲೆ, ನಿವೃತ್ತಿ ತಾಂದಳೆ, ಸಂಜೀವ ಮಾಂಡ್ರೆ, ನಾಗರಾಜ ತಿರುಮಲೆ, ಪರಶುರಾಮ ಮೆಹರವಾಡೆ, ಪರಶುರಾಮ, ಪುಂಡಲೀಕ, ಉಮಾಕಾಂತ ಮುಂತಾದವರು ಪಾಲ್ಗೊಂಡಿದ್ದರು.

# ಪಂಚೇಂದ್ರಿಯಗಳು ನಮ್ಮ ಹಿಡಿತದಲ್ಲಿ ಇರಬೇಕು



■ವಿಜಯಸಾಕ್ಷಿ ಸುದ್ದಿ, ಗದಗ

ನಾವು ನೋಡುವ ದೃಷ್ಟಿಯಂತೆ ಸೃಷ್ಟಿ ಇರುತ್ತದೆ. ನಮ್ಮ ನೋಟವು ಶುದ್ಧವಾಗಿದ್ದರೆ ಇತರರ ಮೇಲೆ ನಮ್ಮ ಭಾವನೆಗಳು ನಿರ್ಮಾಣವಾಗುತ್ತವೆ ಎಂದು ಹಾರನಹಳ್ಳಿಯ ಸುಕ್ಷೇತ್ರ ಕೋಡಿಮಠ ಮಹಾಸಂಸ್ಥಾನದ ಪೂಜ್ಯ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.

ಅವರು ಗದುಗಿನ ಅಕ್ಕನ ಬಳಗದಲ್ಲಿ ಜರುಗಿದ ಫೋಟೋ ಅನಾವರಣ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಮನಸ್ಸಿಗೆ ಇಡೀ ಪ್ರಪಂಚವನ್ನೇ ಸುತ್ತಿ ಬರುವ ಸಾಮರ್ಥ್ಯ ಇದೆ. ಮನಸ್ಸಿನ ನಿಗ್ರಹಗಳನ್ನು ತಡೆದು ಭಗವಂತನ ಸ್ಮರಣೆ ಮಾಡುವುದರಿಂದ ಮನುಷ್ಯ ಪರಿಪೂರ್ಣನಾಗುವನು. ನಮ್ಮ ಪಂಚೇಂದ್ರಿಯಗಳು ನಮ್ಮ ಹಿಡಿತದಲ್ಲಿ ಇರಬೇಕು. ಜೀವನದ ಪ್ರತಿ ಹಂತದಲ್ಲಿ ಪರೋಪಕಾರಿಯಾಗಿ ತ್ಯಾಗ ಭಾವದಿಂದ ಪ್ರೀತಿಯಿಂದ ಬಾಳಿ ಜೀವನವನ್ನು ಸಾರ್ಥಕ ಮಾಡಿಕೊಳ್ಳಬೇಕು ಎಂದರು.

ಅಕ್ಕನ ಬಳಗದಲ್ಲಿ ರತ್ನಕ್ಕ ಪಾಟೀಲ ಹಾಗೂ ಅವರ ಸಹೋದರಿಯ ಫೋ-ಟೋ ಅನಾವರಣವನ್ನು ಪೂಜ್ಯರು ನೆರವೇರಿಸಿದರು. ಉಮಾ ರಾಮನಕೊಪ್ಪ ಪ್ರಾರ್ಥಿಸಿದರು, ಅಕ್ಕನ ಬಳಗದ ಅಧ್ಯಕ್ಷೆ ಜಯಶ್ರೀ ಹುಬ್ಬಳ್ಳಿ ಅಧ್ಯಕ್ಷತೆ ವಹಿಸಿದ್ದರು. ಶಾರದಾ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಲಲಿತಾ ಬಾಳಿಹಳ್ಳಿಮಠ ನಿರೂಪಿಸಿದರು. ಕಾರ್ಯದರ್ಶಿ ಜಯಶ್ರೀ ಪಾಟೀಲ ವಂದಿಸಿದರು. ಭಕ್ತಿ ಸೇವೆಯನ್ನು ಜಯಲಕ್ಷ್ಮೀ ಪಾಟೀಲ ವಹಿಸಿದ್ದರು. ವೇದಿಕೆಯ ಮೇಲೆ ಟ್ರಸ್ಟ್ ಅಧ್ಯಕ್ಷೆ ಕಸ್ತೂರಿ ಹಿರೇಗೌಡರ, ಖಜಾಂಚಿ ಶಿವಲೀಲಾ ಹಿರೇಮಠ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮೃತ್ಯುಂಜಯ ಸಂಕೇಶ್ವರ, ಉಮೇಶ ಹುಬ್ಬಳ್ಳಿ, ವಿಜಯಕುಮಾರ ಬಾಳಿಹಳ್ಳಿಮಠ, ಶಿವಾನಂದಯ್ಯ ಹಿರೇಮಠ, ಡಾ.ಅನಂತ ಶಿವಪೂರ, ಡಾ. ಶೇಖರ ಸಜ್ಜನರ, ರತ್ನಕ್ಕ ಪಾಟೀಲ ಹಾಗೂ ಕುಟುಂಬದ ಸದಸ್ಯರು, ಅಕ್ಕನ ಬಳಗದ ಸದಸ್ಯರು ಹಾಗೂ ಟ್ರಸ್ಟಿಗಳು ಪಾಲ್ಗೊಂಡಿದ್ದರು.

# ರಸ್ತೆ ನಿಯಮ ಪಾಲಿಸದ ಸವಾರರಿಗೆ ದಂಡ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹೆಲ್ಮೆಟ್ ಧರಿಸದ ದ್ವಿಚಕ್ರ ವಾಹನ ಸವಾರರಿಗೆ ಪಟ್ಟಣದ ಪೊಲೀಸರು ದಂಡ ವಿಧಿಸುವ ಮೂಲಕ ಚುರುಕು ಮುಟ್ಟಿಸಲಾರಂಭಿಸಿದ್ದಾರೆ. ಶನಿವಾರ ಪಟ್ಟಣದ ಆಯಕಟ್ಟಿನ ಸ್ಥಳಗಳಲ್ಲಿ ನಿಂತು ಹೆಲ್ಮೆಟ್ ಧರಿಸದ ಹಾಗೂ ದೋಷಪೂರಿತ ನಂಬರ್ ಪ್ಲೇಟ್ ಹೊಂದಿದ ಬೈಕ್ ಸವಾರರಿಗೆ ಪಿಎಸ್‌ಐ ಐಶ್ವರ್ಯ ನಾಗರಾಳ ದಂಡ ವಿಧಿಸಿದರು.



ಪಟ್ಟಣ ಹಾಗೂ ಹೋಬಳಿಯಾದ್ಯಂತ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ಹೆಚ್ಚಾಗಿದ್ದರಿಂದ ಅಪಘಾತಗಳೂ ಹೆಚ್ಚುತ್ತಿವೆ. ಆದ್ದರಿಂದ, ಪ್ರತಿಯೊಬ್ಬರೂ ಹೆಲ್ಮೆಟ್ ಧರಿಸಿ ನಿಯಮ ಪಾಲನೆ ಜತೆಗೆ ಜೀವರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಪಿಎಸ್‌ಐ ಐಶ್ವರ್ಯ ನಾಗರಾಳ ಸವಾರರಿಗೆ ಎಚ್ಚರಿಕೆ ನೀಡಿದರು.


## ಗ್ರಾಮ ಪಂಚಾಯತ, ಕಾರ್ಯಾಲಯ, ವಡವಿ

ತಾಲೂಕ : ಶಿರಹಟ್ಟಿ ಜಿಲ್ಲಾ : ಗದಗ

ಸಂ.ಗ್ರಾ.ಪಂಹೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2025-26 ದಿನಾಂಕ: 18/08/2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ವಡವಿ ಇವರು 2025-26ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮ್‌ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 01 | ಅಲಗಿಲವಾಡ ಗ್ರಾಮದ ಫಕ್ಕೀರಯ್ಯ ಮಠಪತಿ ಮನೆಯಿಂದ ರಾಜು ಬಡಿಗೇರ ಇವರ ಮನೆಯ ವರೆಗೆ ಸಿ.ಸಿ ರಸ್ತೆ ನಿರ್ಮಾಣ | 455091 | 1000 | ಖಾಲಿ ಟೆಂಡರ್ ಗ್ರಾಮ ಪಂಚಾಯತಿ ಯಿಂದ ಪಡೆದು ಸಲ್ಲಿಸುವುದು |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮ್‌ಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ 19/08/2025 ರಿಂದ 29/08/2025 ರವರೆಗೆ, ಭರ್ತಿ ಮಾಡಿ ದರಪಟ್ಟಿ ಫಾರಂ ಸಲ್ಲಿಸುವ ದಿನಾಂಕ 29/08/2025 ರವರೆಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ 29/08/2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ 30/08/2025 ರ ಬೆಳಿಗ್ಗೆ 11.00 ಗಂಟೆ.

**ನಿಬಂಧನೆಗಳು :-** ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ವಡವಿ ಇವರಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ವಡವಿ

ಸಹಿ/- ಅಧ್ಯಕ್ಷರು, ಗ್ರಾಮ ಪಂಚಾಯತಿ ವಡವಿ

## ಗ್ರಾಮ ಪಂಚಾಯತ, ಕಾರ್ಯಾಲಯ, ಹೆಬ್ಬಾಳ

ತಾಲೂಕ : ಶಿರಹಟ್ಟಿ ಜಿಲ್ಲಾ : ಗದಗ

ಸಂ.ಗ್ರಾ.ಪಂಹೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2025-26 ದಿನಾಂಕ: 18/08/2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಹೆಬ್ಬಾಳ ಇವರು 2025-26ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮ್‌ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 01 | ಚವಡಾಳ ಗ್ರಾಮದಲ್ಲಿ ಧರ್ಮಣ್ಣ ನಾಯಕ ಇವರ ಮನೆಯಿಂದ ಸುರೇಶ ನಾಯಕ ಇವರ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 429882 | 1000 | ಖಾಲಿ ಟೆಂಡರ್ ಗ್ರಾಮ ಪಂಚಾಯತಿ ಯಿಂದ ಪಡೆದು ಸಲ್ಲಿಸುವುದು |
| 02 | ಚವಡಾಳ ಗ್ರಾಮದ ಹನುಮಂತಪ್ಪ ನಾಯಕ ಇವರ ಮನೆಯಿಂದ ಲಕ್ಷ್ಮಣ ನಾಯಕ ಇವರ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 401922 | 1000 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮ್‌ಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ 19/08/2025 ರಿಂದ 29/08/2025 ರವರೆಗೆ, ಭರ್ತಿ ಮಾಡಿ ದರಪಟ್ಟಿ ಫಾರಂ ಸಲ್ಲಿಸುವ ದಿನಾಂಕ 29/08/2025 ರವರೆಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ 29/08/2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ 30/08/2025 ರ ಬೆಳಿಗ್ಗೆ 11.00 ಗಂಟೆ.

**ನಿಬಂಧನೆಗಳು :-** ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಹೆಬ್ಬಾಳ ಇವರಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಹೆಬ್ಬಾಳ

ಸಹಿ/- ಅಧ್ಯಕ್ಷರು, ಗ್ರಾಮ ಪಂಚಾಯತಿ ಹೆಬ್ಬಾಳ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka